# NEWPAPERS - Viksit Krushi Sankalp Abhiyan from 29th May to 12th June 2025 at Karnataka



ಕೌಶಲಾಭಿವೃದ್ಧಿ, ಉದ್ಯಮ ಶೀಲತೆ, ಜೀವನೋಪಾಯ ಇಲಾಖೆ ಕಾರ್ಯದರ್ಶಿ ಡಾ.ಏಕರೂಪ ಕೌರ್ ಹೇಳಿಕೆ

## ರೈತರ ಸಬಲೀಕರಣಕ್ಕೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನ

■ ವಿಜಯವಾಣಿ ಸುದ್ದಿಜಾಲ ಕೋಲಾರ

ಭಾರತ ಕೃಷಿ ಪ್ರಧಾನ ರಾಷ್ಟ್ರ. ವಿಕಸಿತ ಅಭಿಯಾನದಲ್ಲಿ ರೈತರಿಗೆ ನೀಡುವ ತರಬೇತಿಯಿಂದ ಸಬಲೀಕರಣ ಕಾಣಬಹುದು ಎಂದು ಕೌಶಲಾಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಇಲಾಖೆಯ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಏಕರೂಪ ಕೌರ್ ಹೇಳಿದರು.

ಐಸಿಎಆರ್ ಕೃಷಿ ವಿಜ್ಞಾನ ಕೇಂದ್ರ, ಕೃಷಿ, ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ, ಪಶುಸಂಗೋಪನಾ ಇಲಾಖೆಗಳ ಸಹಯೋಗದೊಂದಿಗೆ ಜಿಲ್ಲಾಡಳಿತ ಭವನದ ಆವರಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ-2025 ಹಾಗೂ ಮುಂಗಾರು ಪೂರ್ವ ಕೃಷಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು. ಕಾಲಕ್ಕೆ ತಕ್ಕಂತೆ ಬೆಳೆಗಳನ್ನು ಬೆಳೆಯುವ ಕುರಿತು ರೈತರಿಗೆ ಜಾಗೃತಿ ಮೂಡಿಸಿದರೆ ಉತ್ತಮ ಆದಾಯ ಗಳಿಸುತ್ತಾರೆ ಎಂದರು.

ಕೇಂದ್ರ, ರಾಜ್ಯ ಸರ್ಕಾರಗಳು ವಿವಿಧ ಇಲಾಖೆಗಳ ಮೂಲಕ ರೈತರಿಗಾಗಿ ಹಲವು ಯೋಜನೆಗಳನ್ನ ಜಾರಿಗೆ ತರುತ್ತವೆ. ಅವನ್ನು ಸಮರ್ಪಕವಾಗಿ ಅರ್ಹರಿಗೆ ತಲುಪಿಸಿದರೆ ಯೋಜನೆಯ ಉದ್ದೇಶ ಈಡೇರುತ್ತದೆ. ಕೇಂದ್ರದ ಸರ್ಕಾರ ಕೃಷಿ ಇಲಾಖೆಯಿಂದ ಮುಂಗಾರು ಹಂಗಾಮಿನ ಅಂಗವಾಗಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನವನ್ನು ಜೂ.12 ರವರೆಗೆ ನಡೆಸುತ್ತಿದ್ದು, ಇದರ ಪ್ರಯೋಜನ ಪಡೆದುಕೊಳ್ಳಲು ಮುಂದಾಗಬೇಕು ಎಂದು ಸಲಹೆ ನೀಡಿದರು. ಅಭಿಯಾನದಡಿ 1,500 ರಿಂದ 2,000 ತಂಡಗಳ ಮೂಲಕ ದೇಶದ 700 ಜಿಲ್ಲೆಗಳಲ್ಲಿನ ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗುತ್ತಿದೆ. ಇದಕ್ಕೆ ಜಿಲ್ಲೆಯೂ ಆಯ್ಕೆಯಾಗಿರುವುದು ಸಂತಸ ತಂದಿದೆ ಎಂದು ಖುಷಿ ವ್ಯಕ್ತಪಡಿಸಿದರು.

ಕೋಲಾರ ಜಿಲ್ಲಾ ಡಳಿತ ಭವನದಲ್ಲಿ ಹಮ್ಮಿಕೊಂಡಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ 2025 ಹಾಗೂ ಮುಂಗಾರು ಪೂರ್ವ ಕೃಷಿ ಅಭಿಯಾನಕ್ಕೆ ಸರ್ಕಾರದ ಪ್ರಧಾನ ಕಾರ್ಯದರ್ಶಿ ಏಕ ರೂಪ್ ಕೌರ್ ಚಾಲನೆ ನೀಡಿದರು. ಡಾ.ಎಂ.ಆರ್.ರವಿ, ಪ್ರವೀಣ್ ಪಿ.ಬಾಗೇವಾಡಿ, ಸುಮಾ, ಕುಮಾರಸ್ವಾಮಿ, ಡಾ.ಶಿವಾನಂದ ಹೊಂಗಲ ಇದ್ದರು.

ಇಲಾಖೆಯ ಮುಖ್ಯಸ್ಥ ಡಾ.ಶಿವಾನಂದ ಹೊಂಗಲ ಮಾತನಾಡಿ, ಮುಂಗಾರು ಬೆಳೆಗಳಿಗೆ ಸಂಬಂಧಿಸಿದ ಸುಧಾರಿತ ಮತ್ತು ಆಧುನಿಕ ತಂತ್ರಜ್ಞಾನಗಳ ಬಗ್ಗೆ ರೈತರಲ್ಲಿ ಜಾಗೃತಿ ಮೂಡಿಸಲಾಗುವುದು. ಸರ್ಕಾರಿ ಯೋಜನೆಗಳ ಕುರಿತು ಮಾಹಿತಿ ಒದಗಿಸುವುದು. ಬೆಳೆ ಮತ್ತು ಕೃಷಿ ಪರಿಕರಗಳ ಆಯ್ಕೆಗಳ ಬಗ್ಗೆ ಮಾಹಿತಿ ನೀಡುವುದು, ಮಣ್ಣಿನ ಆರೋಗ್ಯ ಕಾರ್ಡ್‌ಗಳ ಬಳಕೆ ಉತ್ತೇಜಿಸುವುದು ಮತ್ತು ಮಣ್ಣು ಪರೀಕ್ಷೆ ಆಧಾರಿತ ಪರಿಕರ ಮತ್ತು ಬೆಳೆ ಆಯ್ಕೆ ಮಾಡಲಾಗುವುದು ಎಂದು ಹೇಳಿದರು. ರಸಗೊಬ್ಬರಗಳ ವಿವೇಚನಾಯುಕ್ತ ಬಳಕೆಯನ್ನು ಉತ್ತೇಜಿಸಿ ಉತ್ತಮ ಕೃಷಿ ಪದ್ಧತಿಗಳ ಮೇಲೆ ಒತ್ತು ನೀಡುವುದು. ಭವಿಷ್ಯದ ಸಂಶೋಧನೆ ರೂಪಿಸಲು ರೈತರಿಂದ ಕೃಷಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಅಭಿಯಾನದ ಉದ್ದೇಶವಾಗಿದೆ ಎಂದು ತಿಳಿಸಿದರು. ಮಹಾವಿದ್ಯಾಲಯದ ಡೀನ್ ಡಾ.ರಾಘವೇಂದ್ರ ಮೆಸ್ತಾ, ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಎಂ.ಸುಮಾ, ಅಭಿಯಾನದ ನೋಡಲ್ ಅಧಿಕಾರಿ ಡಾ.ಡಿ.ವಿ.ಕೋಲಿಕರ್, ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕ ಕುಮಾರಸ್ವಾಮಿ ಇದ್ದರು.

### 100 ಗ್ರಾಪಂ ವ್ಯಾಪ್ತಿಯಲ್ಲಿ ಅಭಿಯಾನ

ಜಿಲ್ಲೆಯ 100 ಗ್ರಾಪಂ ವ್ಯಾಪ್ತಿಗಳಲ್ಲಿ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಕೃಷಿ ವಿಶ್ವವಿದ್ಯಾಲಯ, ವಿಜ್ಞಾನ ಕೇಂದ್ರಗಳು, ಕೃಷಿ, ತೋಟಗಾರಿಕೆ, ರೇಷ್ಮೆ, ಪಶುಸಂಗೋಪನೆ ಹಾಗೂ ಆತ್ಮಯೋಜನೆ ಸಹಯೋಗದೊಂದಿಗೆ ಮುಂಗಾರು ಹಂಗಾಮಿನಲ್ಲಿ ಕೃಷಿಕರಿಗೆ ಹೊಸ ತಾಂತ್ರಿಕತೆಗಳು ಲಭ್ಯವಾಗುವಂತೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನವನ್ನು ಏರ್ಪಡಿಸಲಾಗಿದೆ ಎಂದು ಇಲಾಖೆಯ ಮುಖ್ಯಸ್ಥ ಡಾ.ಶಿವಾನಂದ ಹೊಂಗಲ ಹೇಳಿದರು.

**Vijayavani Newspaper – 30-5-2025**



30 ಮೇ 2025 twitter.com/vijaykarnataka facebook.com/vijaykarnataka www.vijaykar

ವಿಕಸಿತ ಕೃಷಿ ಸಂಕಲ್ಪ ಅಭಿಯಾನ-2025ಕ್ಕೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಏಕ್‌ರೂಪ್‌ಕೌರ್ ಚಾಲನೆ

## ತರಬೇತಿಯಿಂದ ರೈತರ ಸಬಲೀಕರಣ

■ ವಿಕ ಸುದ್ದಿಲೋಕ ಕೋಲಾರ

ಭಾರತ ಕೃಷಿ ಪ್ರಧಾನ ರಾಷ್ಟ್ರ ವಿಕಸಿತ ಅಭಿಯಾನದಲ್ಲಿ ರೈತರಿಗೆ ನೀಡುವ ತರಬೇತಿಯಿಂದ ಸಬಲೀಕರಣ ಕಾಣಬಹುದು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಏಕ್‌ರೂಪ್ ಕೌರ್ ಹೇಳಿದರು.

ಜಿಲ್ಲಾಡಳಿತ ಭವನದ ಆವರಣದಲ್ಲಿ ಐಸಿಎಆರ್-ಕೃಷಿ ವಿಜ್ಞಾನ ಕೇಂದ್ರ, ಕೃಷಿ, ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ, ಪಶುಸಂಗೋಪನಾ ಇಲಾಖೆಗಳ ಸಹಯೋಗದೊಂದಿಗೆ ಗುರುವಾರ ಹಮ್ಮಿಕೊಂಡಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ-2025 ಹಾಗೂ ಮುಂಗಾರು ಪೂರ್ವ ಕೃಷಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿ, ಕಾಲಕ್ಕೆ ತಕ್ಕಂತೆ ಬೆಳೆಗಳನ್ನು ಬೆಳೆಯುವ ಕುರಿತು ರೈತರಿಗೆ ಜಾಗೃತಿ ಮೂಡಿಸಿದರೆ ಉತ್ತಮ ಆದಾಯ ಗಳಿಸುತ್ತಾರೆ ಎಂದರು.

ಕೇಂದ್ರ, ರಾಜ್ಯ ಸರಕಾರಗಳು ನಾನಾ ಇಲಾಖೆಗಳ ಮೂಲಕ ರೈತರಿಗಾಗಿ ಹಲವು ಯೋಜನೆಗಳನ್ನ ಜಾರಿಗೆ ತರುತ್ತದೆ. ಅದನ್ನು ಸಮರ್ಪಕವಾಗಿ ಅರ್ಹ ಫಲಾನುಭವಿಗಳಿಗೆ ಮನೆ ಬಾಗಿಲಿಗೆ ತಲುಪಿಸಿದರೆ ಉದ್ದೇಶ ಈಡೇರುತ್ತದೆ. ಕೇಂದ್ರ ಸರಕಾರ ಕೃಷಿ ಇಲಾಖೆ ವತಿಯಿಂದ ಮುಂಗಾರು ಹಂಗಾಮಿನ ಅಂಗವಾಗಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನವನ್ನು ಜೂನ್ 12 ರವರೆಗೆ ನಡೆಸುತ್ತಿದ್ದು, ಇದರ ಪ್ರಯೋಜನ ಪಡೆದುಕೊಳ್ಳಲು ಮುಂದಾಗಬೇಕು ಎಂದು ಸಲಹೆ ನೀಡಿದರು.

ಅಭಿಯಾನದಡಿಯಲ್ಲಿ 1500 ರಿಂದ 2000 ತಂಡಗಳ ಮೂಲಕ ದೇಶದ 700 ಜಿಲ್ಲೆಗಳಲ್ಲಿನ ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗುತ್ತಿದೆ. ಇದಕ್ಕೆ ಜಿಲ್ಲೆಯೂ ಆಯ್ಕೆಯಾಗಿರುವುದು ಸಂತಸ ತಂದಿದೆ ಎಂದು ಖುಷಿ ವ್ಯಕ್ತಪಡಿಸಿದರು.

**100 ಗ್ರಾಪಂಗಳಲ್ಲಿ ಅಭಿಯಾನ:** ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಶಿವಾನಂದ ಹೊಂಗಲ ಮಾತನಾಡಿ, ಜಿಲ್ಲೆಯ 100 ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಕೃಷಿ ವಿಶ್ವವಿದ್ಯಾಲಯ, ವಿಜ್ಞಾನ ಕೇಂದ್ರಗಳು, ಕೃಷಿ, ತೋಟಗಾರಿಕೆ, ರೇಷ್ಮೆ, ಪಶುಸಂಗೋಪನೆ ಹಾಗೂ ಆತ್ಮ ಯೋಜನೆ ಸಹಯೋಗದೊಂದಿಗೆ ಮುಂಗಾರು ಹಂಗಾಮಿನಲ್ಲಿ ಕೃಷಿಕರಿಗೆ ಹೊಸ ತಾಂತ್ರಿಕತೆಗಳು ಲಭ್ಯವಾಗುವಂತೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನವನ್ನು ಏರ್ಪಡಿಸಲಾಗಿದೆ ಎಂದು ಹೇಳಿದರು.

ಮುಂಗಾರು ಬೆಳೆಗಳಿಗೆ ಸಂಬಂಧಿಸಿದ ಸುಧಾರಿತ ಮತ್ತು ಆಧುನಿಕ ತಂತ್ರಜ್ಞಾನಗಳ ಬಗ್ಗೆ ರೈತರಲ್ಲಿ ಜಾಗೃತಿ ಮೂಡಿಸಲಾಗುವುದು. ಸರಕಾರಿ ಯೋಜನೆಗಳ ಕುರಿತು ಮಾಹಿತಿಯನ್ನು ಒದಗಿಸುವುದು. ಬೆಳೆ ಮತ್ತು ಕೃಷಿ ಪರಿಕರಗಳ ಆಯ್ಕೆಗಳ ಬಗ್ಗೆ ಮಾಹಿತಿ ನೀಡುವುದು, ಮಣ್ಣಿನ ಆರೋಗ್ಯ ಕಾರ್ಡ್‌ಗಳ ಬಳಕೆಯನ್ನು ಉತ್ತೇಜಿಸುವುದು ಮತ್ತು ಮಣ್ಣು ಪರೀಕ್ಷೆ ಆಧರಿತ ಪರಿಕರ ಮತ್ತು ಬೆಳೆ ಆಯ್ಕೆ ಮಾಡಲಾಗುವುದು ಎಂದು ಹೇಳಿದರು.

ರಸಗೊಬ್ಬರಗಳ ವಿವೇಚನಾಯುಕ್ತ ಬಳಕೆಯನ್ನು ಉತ್ತೇಜಿಸಿ ಉತ್ತಮ ಕೃಷಿ ಪದ್ಧತಿಗಳ ಮೇಲೆ ಒತ್ತು ನೀಡುವುದು. ಭವಿಷ್ಯದ ಸಂಶೋಧನೆಯನ್ನು ರೂಪಿಸಲು ರೈತರಿಂದ ಕೃಷಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಅಭಿಯಾನದ ಉದ್ದೇಶವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ, ಜಿಪಂ ಸಿಇಒ ಡಾ.ಪ್ರವೀಣ್ ಪಿ.ಬಾಗೇವಾಡಿ, ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ.ರಾಘವೇಂದ್ರ ಮೆಸ್ತಾ, ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಎಂ.ಸುಮಾ, ಅಭಿಯಾನದ ನೋಡಲ್ ಅಧಿಕಾರಿ ಡಾ.ಡಿ.ವಿ.ಕೋಲಿಕರ್, ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕ ಕುಮಾರಸ್ವಾಮಿ ಉಪಸ್ಥಿತರಿದ್ದರು.

ಜಿಲ್ಲಾಡಳಿತ ಭವನದ ಆವರಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ-2025 ಹಾಗೂ ಮುಂಗಾರು ಪೂರ್ವ ಕೃಷಿ ಅಭಿಯಾನಕ್ಕೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಏಕ್‌ರೂಪ್‌ಕೌರ್ ಚಾಲನೆ ನೀಡಿದರು.

30/05/2025 09:19

**Vijaykarnataka Newspaper – 30-5-2025**

# ವಿಕಸಿತ ಕೃಷಿ ಸಂಕಲ್ಪ ಅಭಿಯಾನಕ್ಕೆ ಚಾಲನೆ



»ಜನಮಾಧ್ಯಮ, ಶಿರಸಿ: ಧಾರವಾಡ ಕೃಷಿ ವಿಶ್ವವಿದ್ಯಾಲಯ, ನವದೆಹಲಿಯ ಕೃಷಿ ಮತ್ತು ರೈತ ಕಲ ಮಂತ್ರಾಲಯ.ಐ.ಸಿ.ಎ.ಆರ್ ಕೃಷಿ ವಿಜ್ಞಾನ ಕೇಂದ್ರದ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಆಶ್ರಯದಲ್ಲಿ ಹಮ್ಮಿಕೊಂಡ ವಿಕಸಿತ ಕೃಷಿ ಸಂಕಲ್ಪ ಅಭಿ ತಾಲೂಕಿನ ಅಂಡಗಿಯಲ್ಲಿ ಚಾಲನೆ ನೀಡಲಾಯಿತು.

ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ.ಪಿ. .ಪಾಟೀಲ್ ಹಾಗೂ ಕೋಡಿಹಳ್ಳಿ ಚಂದ್ರಶೇಖರ ಗಿಡ ಗಿ ನೆಡುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾ ಕಾರ್ಯದರ್ಶಿ ರಾಘವೇಂದ್ರ ನಾಯ್ಕ ಕಿರವತ್ತಿ, ಜಿಲ್ಲಾ ಸತೀಶ ನಾಯ್ಕ, ಶಿರಸಿ ಕೆವಿಕೆ ಮುಖ್ಯಸ್ಥೆ ಡಾ.ರೂಪಾ ಪಾ ಮತ್ತಿತರರು ಇದ್ದರು.

# ವೈಜ್ಞಾನಿಕವಾಗಿ ಕೃಷಿ ಮಾಡಿದರೆ ಲಾಭ ನಿಶ್ಚಿತ

**ಕೃಷಿ ವಿವಿ ಕುಲಪತಿ ಪಿ.ಎಲ್.ಪಾಟೀಲ ಅಭಿಮತ | ಕೃಷಿ ಕಾರ್ಯಾಗಾರಕ್ಕೆ ಚಾಲನೆ**



# ಕೃಷಿಕರಿಗೆ ಮಣ್ಣು, ನೀರೇ ಜೀವನಾಧಾರ

ರಾಜ್ಯಮಟ್ಟದ ಕಾರ್ಯಾಗಾರ | ರೈತರ ಮಕ್ಕಳಿಗೆ ವಿವಿಗಳಲ್ಲಿ ಮೀಸಲು | ಕೃಷಿ ವಿವಿ ಕುಲಪತಿ ಡಾ.ಪಾಟೀಲ್



**30-5-2025**

ವಿರುದ್ಧ ಮುಗಿಬಿದ್ದಿರುವ ಘಟನೆ ಎಂಬುದಾಗಿ ವಿಧಾನ ಪರಿಷತ್ ಬಂಗಾರಪೇಟೆ ಶಾಸಕ ಎಸ್.ಎನ್. ಕಿತ್ತಾಟವನ್ನು ಹೆಚ್ಚಿಸುವ ಸಂಭವವಿದೆ.

## ವಿಕಸಿತ ಕೃಷಿ ಸಂಕಲ್ಪ ಅಭಿಯಾನಕ್ಕೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಚಾಲನೆ

# ರೈತರ ಸಬಲೀಕರಣಕ್ಕೆ ಅಭಿಯಾನ

ಪ್ರಜಾವಾಣಿ ವಾರ್ತೆ



ಕೋಲಾರದಲ್ಲಿ ಗುರುವಾರ ವಿಕಸಿತ ಕೃಷಿ ಸಂಕಲ್ಪ ಅಭಿಯಾನ 2025 ಹಾಗೂ ಮುಂಗಾರು ಪೂರ್ವ ಕೃಷಿ ಅಭಿಯಾನಕ್ಕೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಏಕರೂಪ್ ಕೌರ್ ಚಾಲನೆ ನೀಡಿದರು

**ಕೋಲಾರ:** 'ಕಾಲಕ್ಕೆ ತಕ್ಕಂತೆ ಬೆಳೆಗಳನ್ನು ಬೆಳೆಯುವ ಕುರಿತು ಜಾಗೃತಿ ಮೂಡಿಸಿದರೆ ರೈತರು ಉತ್ತಮ ಆದಾಯ ಗಳಿಸುತ್ತಾರೆ. ವಿಕಸಿತ ಅಭಿಯಾನದಲ್ಲಿ ನೀಡುವ ತರಬೇತಿಯಿಂದ ರೈತರು ಸಬಲೀಕರಣ ಕಾಣಬಹುದು' ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಏಕರೂಪ್ ಕೌರ್ ಹೇಳಿದರು.

ಜಿಲ್ಲಾಡಳಿತ ಭವನದ ಆವರಣದಲ್ಲಿ ಐಸಿಎಆರ್-ಕೃಷಿ ವಿಜ್ಞಾನ ಕೇಂದ್ರ, ಕೃಷಿ, ತೋಟಗಾರಿಕೆ. ರೇಷ್ಮೆ, ಮೀನುಗಾರಿಕೆ, ಪಶುಸಂಗೋಪನಾ ಇಲಾಖೆ ಸಹಯೋಗದೊಂದಿಗೆ ಗುರುವಾರ ಹಮ್ಮಿಕೊಂಡಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ -2025 ಹಾಗೂ ಮುಂಗಾರು ಪೂರ್ವ ಕೃಷಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು.

'ಕೇಂದ್ರ, ರಾಜ್ಯ ಸರ್ಕಾರ ವಿವಿಧ ಇಲಾಖೆಗಳ ಮೂಲಕ ರೈತರಿಗಾಗಿ ಹಲವು ಯೋಜನೆಗಳನ್ನು ಜಾರಿಗೆ ತಂದಿವೆ. ಅದನ್ನು ಸಮರ್ಪಕವಾಗಿ ಅರ್ಹ ಫಲಾನುಭವಿಗಳಿಗೆ ಮನೆ ಬಾಗಿಲಿಗೆ ತಲುಪಿಸಿದರೆ ಉದ್ದೇಶ ಈಡೇರುತ್ತದೆ. ಕೇಂದ್ರ ಸರ್ಕಾರ ಕೃಷಿ ಇಲಾಖೆಯಿಂದ ಮುಂಗಾರು ಹಂಗಾಮಿನ ಅಂಗವಾಗಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನವನ್ನು ಜೂನ್ 12 ರವರೆಗೆ ನಡೆಸುತ್ತಿದೆ. ಇದರ ಪ್ರಯೋಜನವನ್ನು ರೈತರು ಪಡೆದುಕೊಳ್ಳಬೇಕು' ಎಂದು ಸಲಹೆ ನೀಡಿದರು.

'1,500 ರಿಂದ 2,000 ತಂಡಗಳ ಮೂಲಕ ದೇಶದ 700 ಜಿಲ್ಲೆಗಳಲ್ಲಿನ ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗುತ್ತಿದೆ. ಇದಕ್ಕೆ ಕೋಲಾರ ಜಿಲ್ಲೆಯೂ ಆಯ್ಕೆಯಾಗಿರುವುದು ಸಂತಸ ತಂದಿದೆ' ಎಂದು ಎಂದರು.

**100 ಗ್ರಾ.ಪಂಗಳಲ್ಲಿ ಅಭಿಯಾನ:** ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಶಿವಾನಂದ ಹೊಂಗಲ ಮಾತನಾಡಿ, 'ಜಿಲ್ಲೆಯ 100 ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಕೃಷಿ ವಿಶ್ವವಿದ್ಯಾಲಯ, ವಿಜ್ಞಾನ ಕೇಂದ್ರಗಳು, ಕೃಷಿ, ತೋಟಗಾರಿಕೆ, ರೇಷ್ಮೆ, ಪಶುಸಂಗೋಪನೆ ಹಾಗೂ ಆತ್ಮ ಯೋಜನೆ ಸಹಯೋಗದೊಂದಿಗೆ ಮುಂಗಾರು ಹಂಗಾಮಿನಲ್ಲಿ ಕೃಷಿಕರಿಗೆ ಹೊಸ ತಾಂತ್ರಿಕತೆಗಳು ಲಭ್ಯವಾಗುವಂತೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಏರ್ಪಡಿಸಲಾಗಿದೆ' ಎಂದು ಹೇಳಿದರು.

'ಮುಂಗಾರು ಬೆಳೆಗಳಿಗೆ ಸಂಬಂಧಿಸಿದ ಸುಧಾರಿತ ಮತ್ತು ಆಧುನಿಕ ತಂತ್ರಜ್ಞಾನಗಳ ಬಗ್ಗೆ ರೈತರಲ್ಲಿ ಜಾಗೃತಿ ಮೂಡಿಸಲಾಗುವುದು. ಸರ್ಕಾರಿ ಯೋಜನೆಗಳ ಕುರಿತು ಮಾಹಿತಿಯನ್ನು ಒದಗಿಸುವುದು. ಬೆಳೆ ಮತ್ತು ಕೃಷಿ ಪರಿಕರಗಳ ಆಯ್ಕೆಗಳ ಬಗ್ಗೆ ಮಾಹಿತಿ ನೀಡುವುದು, ಮಣ್ಣಿನ ಆರೋಗ್ಯ ಕಾರ್ಡ್‌ಗಳ ಬಳಕೆಯನ್ನು ಉತ್ತೇಜಿಸುವುದು ಮತ್ತು ಮಣ್ಣು ಪರೀಕ್ಷೆ ಆಧಾರಿತ ಪರಿಕರ ಮತ್ತು ಬೆಳೆ ಆಯ್ಕೆ ಮಾಡಲಾಗುವುದು' ಎಂದರು.

ರಸಗೊಬ್ಬರಗಳ ವಿವೇಚನಾಯುಕ್ತ ಬಳಕೆಯನ್ನು ಉತ್ತೇಜಿಸಿ ಉತ್ತಮ ಕೃಷಿ ಪದ್ಧತಿಗಳ ಮೇಲೆ ಒತ್ತು ನೀಡುವುದು. ಭವಿಷ್ಯದ ಸಂಶೋಧನೆಯನ್ನು ರೂಪಿಸಲು ರೈತರಿಂದ ಕೃಷಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಅಭಿಯಾನದ ಉದ್ದೇಶವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಎಂ.ಆರ್.ರವಿ, ಜಿಲ್ಲಾ ಪಂಚಾಯಿತಿ ಸಿಇಒ ಪ್ರವೀಣ್ ಪಿ.ಬಾಗೇವಾಡಿ, ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ರಾಘವೇಂದ್ರ ಮೆಸ್ತಾ, ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಎಂ.ಆರ್.ಸುಮಾ, ಅಭಿಯಾನದ ನೋಡಲ್ ಅಧಿಕಾರಿ ಡಿ.ವಿ. ಕೋಲೆಕರ್, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಕುಮಾರಸ್ವಾಮಿ ಪಾಲ್ಗೊಂಡಿದ್ದರು.

**Prajavani Newspaper– 30-5-2025**

ಕೋಲಾರ ಪತ್ರಿಕೆ
page-4
01 Jun 2025

# ಮೇ ೨೯ರಿಂದ ಜೂ.೧೨ರವರೆಗೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನ



ಐ.ಸಿ.ಎ.ಆರ್–ಕೃಷಿ ವಿಜ್ಞಾನ ಕೇಂದ್ರ, ಕೃಷಿ, ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ, ಪಶುಸಂಗೋಪನಾ ಇಲಾಖೆಗಳ ಸಹಯೋಗದೊಂದಿಗೆ "ವಿಕಸಿತ ಕೃಷಿ ಸಂಕಲ್ಪ ಅಭಿಯಾನ–೨೦೨೫" ಮುಂಗಾರು ಪೂರ್ವ ಕೃಷಿ ಅಭಿಯಾನವನ್ನು ಮೇ. ೨೯ ರಿಂದ ಜೂ. ೧೨ರವರೆಗೆ ಹಮ್ಮಿಕೊಳ್ಳಲಾಗಿದೆ. ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳನ್ನೊಳಗೊಂಡ ಎರಡು ತಂಡಗಳು ಕೋಲಾರ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಎರಡನೇ ದಿನ ಮೇ ೩೦ರಂದು ಅಭಿಯಾನವನ್ನು ಯಶಸ್ವಿಯಾಗಿ ನಡೆಸಿ ಒಂದನೇ ತಂಡದಿಂದ ಹೋಳೂರು, ಐತ್ರಾಸನಹಳ್ಳಿ, ಮುದುವಾಡಿ ಹಾಗೂ ಎರಡನೇ ತಂಡದಿಂದ ತೊಟ್ಲಿ, ಜನಘಟ್ಟ, ಸುಗಟೂರು ಗ್ರಾಮಗಳಲ್ಲಿ ಒಟ್ಟು ೪೭೯ ರೈತರ ಜೊತೆಗೆ ಸಂಪರ್ಕವನ್ನು ಸಾಧಿಸಲಾಯಿತು. ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಜೂ.೧ರಂದು ವಕ್ಕಲೇರಿ, ಬೆಗ್ಲಿಹೊಸಹಳ್ಳಿ, ಮಾಲಸಂದ್ರ, ಟೇಕಲ್ ಆರ್.ಎಸ್.ಕೆ, ಮುದುವತ್ತಿ ದಂಡಿಗಾನಹಳ್ಳಿಗಳಲ್ಲಿ ಕೈಗೊಳ್ಳಲಾಗುವುದು. ನಮ್ಮ ವಾಹನ ತಮ್ಮ ಗ್ರಾಮವನ್ನು ತಲುಪಿದಾಗ ಹೆಚ್ಚಿನ ಸಂಖ್ಯೆಯಲ್ಲಿ ರೈತ ಮತ್ತು ರೈತ ಮಹಿಳೆಯರು ಭಾಗವಹಿಸಿ ಈ ಕಾರ್ಯಕ್ರಮದ ಪ್ರಯೋಜನ ಪಡೆಯಲು ಡಾ. ಶಿವಾನಂದ ಹೊಂಗಲ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

Kolar patrika Newspaper – 01-06-2025

ಕೃಷಿ ವಿಜ್ಞಾನಿಗಳ ಸಲಹೆ | ಪುತ್ತನಪುರದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ

# ರೈತರು ಸೂಕ್ತ ಬಿತ್ತನೆ ಬೀಜದ ಆಯ್ಕೆ ಮಾಡಲಿ

■ ವಿಜಯವಾಣಿ ಸುದ್ದಿಜಾಲ ಗುಂಡ್ಲುಪೇಟೆ

ತಾಲೂಕಿನ ವಿವಿಧ ಗ್ರಾಮಗಳಲ್ಲಿ ಗುರುವಾರ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಆಯೋಜಿಸಲಾಗಿತ್ತು.

ಪುತ್ತನಪುರ, ಹಂಗಳದ ಹೊಸಹಳ್ಳಿ ಗ್ರಾಮಗಳಲ್ಲಿ ಚಾಮರಾಜನಗರ ಕೃಷಿ ವಿಜ್ಞಾನ ಕೇಂದ್ರ, ಕೃಷಿ ಇಲಾಖೆ ಮತ್ತು ಇತರ ಅಭಿವೃದ್ಧಿ ಇಲಾಖೆಗಳು, ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಅಭಿಯಾನಕ್ಕೆ ಚಾಲನೆ ನೀಡಲಾಯಿತು.

ರೈತರಿಗೆ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ಮುಂಗಾರಿಗೆ ಅನುಸರಿಸಬೇಕಾದ ಬೆಳೆ ನಿರ್ವಹಣಾ ಕ್ರಮಗಳು, ಕೃಷಿಯಲ್ಲಿನ ವಿನೂತನ ತಾಂತ್ರಿಕತೆಗಳ ಕುರಿತು ತಿಳಿಸಿಕೊಟ್ಟರು. ಸೂಕ್ತ ತಳಿ ಬಿತ್ತನೆ ಬೀಜದ ಆಯ್ಕೆ, ಬೀಜೋಪಚಾರ, ಗೊಬ್ಬರಗಳ ನಿರ್ವಹಣೆ ಮತ್ತು ಸಸ್ಯ ಸಂರಕ್ಷಣೆ ಕುರಿತು ವಿಜ್ಞಾನಿಗಳಿಂದ ಮಾಹಿತಿ ಒದಗಿಸಲಾಯಿತು. ಅಭಿವೃದ್ಧಿ ಇಲಾಖೆಗಳ ಅಧಿಕಾರಿಗಳು ರೈತರಿಗಾಗಿ ಇರುವ ಸರ್ಕಾರಿ ಯೋಜನೆಗಳು, ಸುರಕ್ಷಿತ ಕೀಟನಾಶಕಗಳ ಬಳಕೆ ಮತ್ತು ಬೀಜೋಪಚಾರ ಆಂದೋಲನದಡಿ ಕೀಟನಾಶಕಗಳನ್ನು ಬಳಸುವಾಗ ಅನುಸರಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳು ಮತ್ತು ಬೀಜೋಪಚಾರದ ಮಹತ್ವದ ಬಗ್ಗೆ ಮಾಹಿತಿಯನ್ನು ಒದಗಿಸಿ ಪದ್ಧತಿ ಪ್ರಾತ್ಯಕ್ಷಿಕೆಗಳನ್ನು ನೀಡಿದರು.

ಕೃಷಿ ಇಲಾಖೆ ಕೃಷಿ ಸಂಜೀವಿನಿ ರಥಕ್ಕೆ ಚಾಲನೆ ನೀಡಿ ಗ್ರಾಮದ ಆಯ್ದ ಸ್ಥಳಗಳಲ್ಲಿ ನಡಿಗೆ ಮೂಲಕ ರೈತಾಪಿ ವರ್ಗದವರಿಗೆ ಅರಿವು ಮಾಡಲಾಯಿತು. ಕೃಷಿ ವಿಜ್ಞಾನ ಕೇಂದ್ರದ ಡಾ.ಚಂದ್ರಶೇಖರ್ ಕಳ್ಳಿಮನಿ, ಡಾ.ಪಂಪನಗೌಡ, ಡಾ.ಶ್ರುತಿ, ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲ ಸಂಸ್ಥೆ ವಿಜ್ಞಾನಿಗಳಾದ ಡಾ.ಶಾಲಿನಿ ಮತ್ತು ಡಾ.ಅಂಕಿತಾ ಗುಪ್ತ, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಶಶಿಧರ್, ತಾಂತ್ರಿಕ ವ್ಯವಸ್ಥಾಪಕರಾದ ವೀಣಾ, ನಂದಿನಿ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಹೇಮಾ, ಉಪಾಧ್ಯಕ್ಷ ಪಿ.ಎಸ್.ಸುರೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಾಜಶೇಖರಪ್ಪ, ಪ್ರಗತಿ ಪರ ರೈತರಾದ ಶಿವಣ್ಣ, ಪವಿತ್ರಕುಮಾರ್, ಕೆಂಪರಾಜು ಇದ್ದರು.



ಗುಂಡ್ಲುಪೇಟೆ ತಾಲೂಕಿನ ಪುತ್ತನಪುರ ಗ್ರಾಮದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಡಾ.ಚಂದ್ರಶೇಖರ್ ಕಳ್ಳಿಮನಿ, ಡಾ.ಪಂಪನ ಗೌಡ, ಡಾ.ಶ್ರುತಿ, ಡಾ.ಶಾಲಿನಿ ಇದ್ದರು.

# ಮಣಗಳ್ಳಿಯಲ್ಲಿ ಅರಿವು ಕಾರ್ಯಕ್ರಮ

**ಹನೂರು:** ತಾಲೂಕಿನ ಮಣಗಳ್ಳಿ ಮತ್ತು ಬಂಡಳ್ಳಿ ಗ್ರಾಮಗಳಲ್ಲಿ ಕೃಷಿ ವಿಜ್ಞಾನ ಕೇಂದ್ರ ಚಾಮರಾಜನಗರ, ಕೃಷಿ ಇಲಾಖೆ ಮತ್ತು ಇತರ ಅಭಿವೃದ್ಧಿ ಇಲಾಖೆಗಳು ಹಾಗೂ ಸಂಘ ಸಂಸ್ಥೆಗಳ ಸಹಯೋಗದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ನಡೆಸಲಾಯಿತು.

ಕೇಂದ್ರದ ವಿಜ್ಞಾನಿಗಳು ತೋಟಗಾರಿಕಾ ಬೆಳೆಗಳ ಸಮಗ್ರ ನಿರ್ವಹಣಾ ಕ್ರಮಗಳನ್ನು ತಿಳಿಸಿದರು. ಮುಖ್ಯವಾಗಿ ಬಾಳೆಯಲ್ಲಿ ಆರೋಗ್ಯಕರ ಕಂದುಗಳು ಹಾಗೂ ಸಸಿಗಳ ಆಯ್ಕೆ ಮತ್ತು ಸುಧಾರಿತ ಅರಿಶಿಣ ತಳಿಗಳ ಬೇಸಾಯ ಕ್ರಮಗಳ ವಿವರಣೆ ನೀಡಿದರು. ಬಾಳೆಯಲ್ಲಿ ಸಮಗ್ರ ಪೋಷಕಾಂಶಗಳ ಮಾಹಿತಿಯನ್ನು ಒದಗಿಸಿ, ಪೊಟ್ಯಾಶ್ ಮತ್ತು ಲಘು ಪೋಷಕಾಂಶಗಳ ಪ್ರಾಮುಖ್ಯತೆ ತಿಳಿಸಿಕೊಟ್ಟರು. ಮುಂಗಾರು ಸಿದ್ಧತೆ ಬಗ್ಗೆ ತಿಳಿಸಿ ಬೀಜೋಪಚಾರದ ಮಹತ್ವದ ಕುರಿತು ಪ್ರಾತ್ಯಕ್ಷಿಕೆಯ ಮೂಲಕ ತಿಳಿಸಿದರು. ಬೆಳೆಗಳ ಸುಧಾರಿತ ತಳಿಗಳು ಹಾಗೂ ಅವುಗಳ ವೈಶಿಷ್ಟತೆಯ ಮಾಹಿತಿ ನೀಡಿದರು. ಮಣ್ಣು ಪರೀಕ್ಷೆಯ ಮಹತ್ವ ಮತ್ತು ಜೈವಿಕ ಗೊಬ್ಬರ, ಲಘು ಪೋಷಕಾಂಶಗಳಿಂದ ಕೊಟ್ಟಿಗೆ ಗೊಬ್ಬರದ ಪುಷ್ಟೀಕರಣದ ಅನುಕೂಲತೆಯ ಕುರಿತು ಮಾಹಿತಿ ಒದಗಿಸಿದರು.

ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲ ಸಂಸ್ಥೆಯ ವಿಜ್ಞಾನಿಗಳು ಬೆಳೆಗಳನ್ನು ಬಾಧಿಸುವ ಕೀಟ, ಪೀಡೆ ಹಾಗೂ ಸಸ್ಯ ರೋಗಗಳ ಜೈವಿಕ ನಿರ್ವಹಣಾ ಕ್ರಮಗಳ ಬಗ್ಗೆ ತಿಳಿಸಿದರು. ಸೈನಿಕ ಹುಳುವಿನ ಹತೋಟಿ ಕ್ರಮಗಳ ವಿವರಣೆ ನೀಡಿದರು. ಬೆಂಗಳೂರಿನ ಪ್ರಾಣಿ ಪೋಷಣೆ ಹಾಗೂ ಶರೀರಶಾಸ್ತ್ರ ಸಂಸ್ಥೆಯ ಡಾ.ಮುತ್ತುಚೆಲುವನ್ ಜಾನುವಾರುಗಳನ್ನು ಬಾಧಿಸುವ ರೋಗಗಳಾದ ಕಾಲುಬಾಯಿ ಜ್ವರ, ಚರ್ಮಗಂಟು ರೋಗ, ಕೆಚ್ಚಲು ಬಾವು, ಚಪ್ಪೆರೋಗ, ಪರಾವಲಂಬಿ ಜೀವಿಗಳ ನಿರ್ವಹಣೆ ಮತ್ತು ಸಮತೋಲನ ಜಾನುವಾರುಗಳ ಪೋಷಣೆ ಕುರಿತು ಮಾಹಿತಿ ಒದಗಿಸಿದರು.

ಕೃಷಿ ಅಧಿಕಾರಿ ನಾಗೇಂದ್ರ ಮತ್ತು ಆತ್ಮ ಉಪಯೋಜನಾ ನಿರ್ದೇಶಕ ರಂಜಿತಾ, ಕೃಷಿ ಇಲಾಖೆಯ ರೈತಪರ ಯೋಜನೆಗಳ ಮಾಹಿತಿ ಒದಗಿಸಿದರು. ತೋಟಗಾರಿಕಾ ಅಧಿಕಾರಿ ಮಹದೇವು ತೋಟಗಾರಿಕೆ ಇಲಾಖೆಯ ಯೋಜನೆಯ ಬಗ್ಗೆ ಮಾಹಿತಿ ನೀಡಿದರು. ಕೃಷಿ ವಿಜ್ಞಾನ ಕೇಂದ್ರದ ಡಾ.ಮೋಹನ್‌ಕುಮಾರ್, ಡಾ.ದೀಪಾ, ಕೃಷಿ ಹವಾಮಾನ ತಜ್ಞ ರಜತ್, ಕೃಷಿ ಕೀಟ ಸಂಪನ್ಮೂಲ ಸಂಸ್ಥೆಯ ವಿಜ್ಞಾನಿಗಳಾದ ಡಾ.ಶಾಲಿನಿ ಮತ್ತು ಡಾ.ಅಂಕಿತಾ ಗುಪ್ತ, ತಾಂತ್ರಿಕ ಮಾಹಿತಿ ಒದಗಿಸಿದರು. ಗ್ರಾಪಂ ಸದಸ್ಯರಾದ ಕುಮಾರ್, ಪರಶಿವ ಮೂರ್ತಿ, ನಾಗಣ್ಣ, ಗುಲ್ಬಿಕರ್ ಅಹಮದ್, ಹಬೀಬಾ ಇತರರು ಇದ್ದರು.

ವಿಜಯ ವಾಣಿ 02/06/2025

**Vijayavani Newspaper – 02-06-2025**



ಸೋಮವಾರ, 2 ಜೂನ್ 2025, ಮೈಸೂರು www.vijaykarnataka.com www.apps.vijaykarnataka.com www.vijaykarnatakaepaper.c

ವಿಜಯ ಕರ್ನಾಟಕ 02/06/2025

# ವಿಕಸಿತ ಕೃಷಿ ಸಂಕಲ್ಪ ಅಭಿಯಾನ

## ಆರೋಗ್ಯದಾಯಕ ಬೆಳೆಗಾಗಿ ಸಾವಯವ ಕೃಷಿಗೆ ಹೆಚ್ಚು ಒತ್ತು ನೀಡಿ । ಪ್ರಗತಿಪರ ರೈತ ಹೊನ್ನೂರು ಪ್ರಕಾಶ್ ಸಲಹೆ

**ವಿಕ ಸುದ್ದಿಲೋಕ** ಚಾಮರಾಜನಗರ

ಕೃಷಿ ಇಲಾಖೆ, ಕೃಷಿ ವಿಜ್ಞಾನ ಕೇಂದ್ರ, ಇತರೆ ಅಭಿವೃದ್ಧಿ ಇಲಾಖೆಗಳು ಹಾಗೂ ಸಂಘ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಯಳಂದೂರು ತಾಲೂಕಿನ ಹೊನ್ನೂರು, ಕೆಸ್ತೂರು, ದುಗ್ಗಹಟ್ಟಿ ಮತ್ತು ಮೆಲ್ಲಹಳ್ಳಿಯಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ನಡೆಸಲಾಯಿತು.

ಹೊನ್ನೂರಿನಲ್ಲಿ ನಡೆದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಪ್ರಗತಿಪರ ರೈತ ಹೊನ್ನೂರು ಪ್ರಕಾಶ್, ''ಮಣ್ಣು ಮತ್ತು ನೀರು ಸಂಪನ್ಮೂಲಗಳನ್ನು ಸಂರಕ್ಷಿಸಿ ಆರೋಗ್ಯದಾಯಕ ಬೆಳೆ ಉತ್ಪನ್ನಗಳನ್ನು ಪಡೆದುಕೊಳ್ಳಲು ಸಾವಯವ ಕೃಷಿಗೆ ಹೆಚ್ಚು ಒತ್ತು ನೀಡಬೇಕು. ರೈತರು ಸಾವಯವ ಪರಿಕರಗಳಾದ ಎರೆಗೊಬ್ಬರ, ಬೇವಿನಹಿಂಡಿ, ಬೇವಿನಎಣ್ಣೆ, ಬೀಜಾಮೃತ, ಜೀವಾಮೃತ, ಪಂಚಗವ್ಯ, ಗೋಕೃಪಾಮೃತ ಜಲ, ಎರೆಜಲ ಇವೆಲ್ಲವುಗಳನ್ನು ತಾವೇ ತಯಾರಿಸಿ ಬೇಸಾಯದಲ್ಲಿ ಬಳಸಿಕೊಳ್ಳಬೇಕು,'' ಎಂದರು.

''ಹವಾಮಾನ ಬದಲಾವಣೆ ಮತ್ತು ಅನಿಶ್ಚಿತತೆಗಳಿಂದ ಸಂಭವಿಸುವ ಬೆಳೆ ನಷ್ಟ ತಪ್ಪಿಸಲು ಕೃಷಿ ವಿಜ್ಞಾನಿಗಳ ಶಿಫಾರಸ್ಸಿನಂತೆ ನಿರ್ವಹಣಾ ಕ್ರಮಗಳನ್ನು ಅನುಸರಿಸಬೇಕು ಮತ್ತು ಬೆಳೆ ಉತ್ಪನ್ನಗಳ ಮೌಲ್ಯವರ್ಧನೆಗೆ ಆದ್ಯತೆ ನೀಡಬೇಕು. ಸಮುದಾಯ ಕೃಷಿಗೆ ಹೆಚ್ಚು ಒತ್ತು ನೀಡಿ ಕೃಷಿಯಲ್ಲಿ ಮಾನವ ಸಂಪನ್ಮೂಲದ ನಿರ್ವಹಣೆ ಮಾಡಬೇಕು,'' ಎಂದು ತಿಳಿಸಿದರು.

ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲ ಸಂಸ್ಥೆಯ ವಿಜ್ಞಾನಿ ಡಾ. ಶಾಲಿನಿ ಮತ್ತು ಡಾ. ಅಂಕಿತಾ ಗುಪ್ತ ಅವರು ಮಾತನಾಡಿ, ಭತ್ತ, ರಾಗಿ, ಮುಸುಕಿನ ಜೋಳ, ಕಬ್ಬು, ಉದ್ದು ಹೆಸರು, ಬಾಳೆ, ತರಕಾರಿ ಹಾಗೂ ಇತರೆ ಬೆಳೆಗಳನ್ನು ಸಾಮಾನ್ಯವಾಗಿ ಬಾಧಿಸುವ ಕೀಟ ಮತ್ತು ರೋಗಗಳ ಜೈವಿಕ ಹತೋಟಿ ಕ್ರಮಗಳ ವಿವರಣೆ ನೀಡಿದರು.

ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ. ಶ್ರುತಿ, ತಾಂತ್ರಿಕ ಅಧಿಕಾರಿ ಡಾ. ಪಂಪನಗೌಡ, ರೇಷ್ಮೆ ವಿಜ್ಞಾನಿ ಡಾ. ಚಂದ್ರಶೇಖರ್ ಕಳ್ಳಿಮನಿ ಅವರು, ಮಳೆ, ಬೆಳೆ, ತಾಂತ್ರಿಕತೆ ಕುರಿತು ಮಾಹಿತಿ ನೀಡಿದರು.

ಸಹಾಯಕ ಕೃಷಿ ನಿರ್ದೇಶಕ ಅಮೃತೇಶ್, ಕೃಷಿ ಅಧಿಕಾರಿ ವೆಂಕಟರಂಗಶೆಟ್ಟಿ, ಸಹಾಯಕ ತೋಟಗಾರಿಕಾ ಅಧಿಕಾರಿ ಶಿವರಂಜನಿ, ರೇಷ್ಮೆ ಅಧಿಕಾರಿ ಚಂದ್ರಕಾಂತ್, ಗ್ರಾಮ ಪಂಚಾಯಿತಿ ಅಧ್ಯಕ್ಷ ಗುರುಮೂರ್ತಿ ಇತರರು ಕಾರ್ಯಕ್ರಮದಲ್ಲಿ ಹಾಜರಿದ್ದರು.

ಹೊನ್ನೂರು ಗ್ರಾಮದಲ್ಲಿ ನಡೆದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮವನ್ನು ಪ್ರಗತಿಪರ ರೈತ ಹೊನ್ನೂರು ಪ್ರಕಾಶ್ ಉದ್ಘಾಟಿಸಿದರು.

## ಪುತ್ತನಪುರ ಗ್ರಾಮದಲ್ಲಿ ರೈತರೊಂದಿಗೆ ಸಂವಾದ

**ವಿಕ ಸುದ್ದಿಲೋಕ** ಚಾಮರಾಜನಗರ

ಕೃಷಿ ವಿಜ್ಞಾನ ಕೇಂದ್ರ, ಕೃಷಿ ಇಲಾಖೆ, ಇತರೆ ಅಭಿವೃದ್ಧಿ ಇಲಾಖೆಗಳು ಹಾಗೂ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಜೂ. 12 ರವರೆಗೆ ಆಯೋಜಿಸಿರುವ ವಿಕಸಿತ ಕೃಷಿ ಸಂಕಲ್ಪ ಅಭಿಯಾನಕ್ಕೆ ಗುಂಡ್ಲುಪೇಟೆ ತಾಲೂಕಿನ ಪುತ್ತನಪುರ ಹಾಗೂ ಹೊಸಹಳ್ಳಿ ಗ್ರಾಮದಲ್ಲಿ ಚಾಲನೆ ನೀಡಲಾಯಿತು.

ಈ ಅಭಿಯಾನದಲ್ಲಿ ಭಾಗವಹಿಸಿದ್ದ ಕೃಷಿ ಸಖಿಯರು ಮತ್ತು ರೈತರಿಗೆ ಮುಂಗಾರಿಗೆ ಅನುಸರಿಸಬೇಕಾದ ಬೆಳೆ ನಿರ್ವಹಣಾ ಕ್ರಮಗಳು ಹಾಗೂ ಕೃಷಿಯಲ್ಲಿನ ಇತ್ತೀಚಿನ ವಿನೂತನ ತಾಂತ್ರಿಕತೆಗಳ ವಿವರಣೆ ನೀಡಿದ ಬಳಿಕ ಆಯ್ದ ಕೃಷಿ ಸಂಬಂಧಿತ ವಿಷಯಗಳ ಚರ್ಚಾಗೋಷ್ಠಿ ನಡೆಸಲಾಯಿತು. ಬಳಿಕ ಸುರಕ್ಷಿತ ಕೀಟನಾಶಕಗಳ ಬಳಕೆ ಮತ್ತು ಬೀಜೋಪಚಾರ ಆಂದೋಲನದಡಿ ಕೀಟನಾಶಕಗಳನ್ನು ಬಳಸುವಾಗ ಅನುಸರಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳು ಮತ್ತು ಬೀಜೋಪಚಾರದ ಮಹತ್ವದ ಬಗ್ಗೆ ಪ್ರಾತ್ಯಕ್ಷಿಕೆ ನೀಡಲಾಯಿತು.

ಕೃಷಿ ವಿಜ್ಞಾನ ಕೇಂದ್ರದ ಡಾ. ಚಂದ್ರಶೇಖರ್ ಕಳ್ಳಿಮನಿ, ಡಾ. ಪಂಪನಗೌಡ, ಡಾ. ಶ್ರುತಿ, ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲ ಸಂಸ್ಥೆಯ ವಿಜ್ಞಾನಿಗಳಾದ ಡಾ. ಶಾಲಿನಿ ಮತ್ತು ಡಾ. ಅಂಕಿತಾಗುಪ್ತ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಶಶಿಧರ್, ತಾಂತ್ರಿಕ ವ್ಯವಸ್ಥಾಪಕರಾದ ವೀಣಾ, ನಂದಿನಿ, ಗ್ರಾಪಂ ಅಧ್ಯಕ್ಷೆ ಹೇಮಾ, ಉಪಾಧ್ಯಕ್ಷ ಪಿ.ಎಸ್. ಸುರೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಾಜಶೇಖರಪ್ಪ, ಪ್ರಗತಿಪರ ರೈತರಾದ ಶಿವಣ್ಣ ಪವಿತ್ರಕುಮಾರ್, ಕೆಂಪರಾಜು ಸೇರಿದಂತೆ ಇನ್ನಿತರರಿದ್ದರು.

ಗುಂಡ್ಲುಪೇಟೆ ತಾಲೂಕಿನ ಪುತ್ತನಪುರ ಗ್ರಾಮದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನದಲ್ಲಿ ರೈತರೊಂದಿಗೆ ಸಂವಾದ ನಡೆಯಿತು.

**Vijaykarnataka Newspaper – 02-06-2025**



ಧಾರವಾಡ ಕೃಷಿ ವಿವಿ ಕುಲಪತಿ ಪಾಟೀಲ ಸಲಹೆ

# ವೈಜ್ಞಾನಿಕ ಪದ್ಧತಿ ಅಳವಡಿಕೆ ಇಂದಿನ ಅಗತ್ಯ

ಪ್ರಜಾವಾಣಿ ವಾರ್ತೆ

ಶಿರಸಿ: 'ಕಾಲಕಾಲಕ್ಕೆ ಮಣ್ಣು ಪರೀಕ್ಷೆ, ಪೋಷಕಾಂಶಗಳ ಪೂರೈಕೆ ಜತೆ ವೈಜ್ಞಾನಿಕ ಕೃಷಿ ಪದ್ಧತಿ ಅನುಸರಿಸಿದರೆ ಕೃಷಿಗೆ ಕೂಡ ಉದ್ಯಮದ ಸ್ವರೂಪ ನೀಡಲು ಸಾಧ್ಯವಿದೆ' ಎಂದು ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಪಿ.ಎಲ್.ಪಾಟೀಲ ಹೇಳಿದರು.

ಅವರು ಗುರುವಾರ ತಾಲ್ಲೂಕಿನ ಅಂಡಗಿ ಕ್ಯಾದಗಿಕೊಪ್ಪದ ಅವಧೂತ ಕಲ್ಲೇಶ್ವರ ಸ್ವಾಮೀಜಿ ಗುರುಮಠದ ಸಭಾಭವನದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಮೂರು ದಿನದ ರೈತ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

'ಕೃಷಿ ಹೊಂಡಗಳ ಮೂಲಕ ನೀರು ಇಂಗಿಸುವ ಕಾರ್ಯ ಅತಿ ಮುಖ್ಯ. ಅಂತರ್ಜಲ ಮಟ್ಟ ಏರಿಕೆಯಾದರೆ ಬೆಳೆಗಳಿಗೆ ಅನುಕೂಲ. ಪೋಷಕಾಂಶಗಳ ಕೊರತೆ ಪತ್ತೆ ಹಚ್ಚಲು ಬೇಸಿಗೆಯಲ್ಲಿ 2 ವರ್ಷಕ್ಕೊಮ್ಮೆ ಮಣ್ಣು ಪರೀಕ್ಷೆ ಮಾಡಿಸಬೇಕು. ಬೆಳೆ ಪದ್ಧತಿಯಲ್ಲಿ ಪರಿವರ್ತನೆ ಮಾಡುತ್ತಿರಬೇಕು. ಅದರಿಂದ ರೋಗ ಹತೋಟಿ ಸಾಧ್ಯ. ಉತ್ಪನ್ನಗಳ ಸಂಸ್ಕರಣೆಗೂ ಮಹತ್ವ ನೀಡಬೇಕು. ರೈತ ಉತ್ಪಾದಕ ಕಂಪನಿಗಳ ಸಹಾಯ ಪಡೆದು ಬೆಳೆಗಳ ಮೌಲ್ಯವರ್ಧನೆ ಮಾಡಬೇಕು. ಕೃಷಿ ಜತೆ ಕುರಿ, ಕೋಳಿ, ಜೇನು, ಸಾಕಾಣಿಕೆ, ಹೈನುಗಾರಿಕೆ, ಮೀನುಗಾರಿಕೆ ಹೆಚ್ಚು ಒತ್ತು ನೀಡಬೇಕು' ಎಂದರು.

'ರಾಜ್ಯದಲ್ಲಿ ರೈತರ ಶ್ರೇಯೋಭಿವೃದ್ಧಿಗೆ 6 ವಿಶ್ವವಿದ್ಯಾಲಯವಿದ್ದು, ಕೃಷಿ ಶಿಕ್ಷಣ ನೀಡುವುದು ಅದರ ಮೂಲ ಉದ್ದೇಶವಾಗಿದೆ. ರೈತರ ಮಕ್ಕಳು ಕೃಷಿ ಶಿಕ್ಷಣ ನೀಡುವತ್ತ ಹೆಚ್ಚಿನ ಒತ್ತು ನೀಡಬೇಕು. ವೈಜ್ಞಾನಿಕ ಪದ್ಧತಿ ಅನುಷ್ಠಾನಗೊಳಿಸಿ, ಇಳುವರಿ ಹೆಚ್ಚಿಸಿಕೊಳ್ಳಬೇಕು. ರಾಸಾಯನಿಕ ಹಾಗೂ ಸಾವಯವ ವಸ್ತುಗಳನ್ನು ಬಳಕೆ ಮಾಡಿ ಸಮಗ್ರ ಕೃಷಿ ಕೈಗೊಳ್ಳಬೇಕು' ಎಂದು ಹೇಳಿದರು.

ಭತ್ತದ ತಳಿ ಸಂರಕ್ಷಕ ರಾಮಕೃಷ್ಣ ಭಟ್ ದೇವತೆಮನೆ, ಸಾಧಕ ಮಹಿಳೆ ಗೌರಿ ನಾಯ್ಕ, ಪ್ರಗತಿಪರ ಕೃಷಿಕರಾದ ಜ್ಞಾನೇಶ, ಯುವರಾಜ ಗೌಡ, ಮಂಜುನಾಥ ನಾಯ್ಕ ಅಂಡಗಿ, ರಾಮಚಂದ್ರ ಮೇಲಿನಮನೆ ಸೊರಬ ಇವರನ್ನು ಸನ್ಮಾನಿಸಿ, ಗೌರವಿಸಲಾಯಿತು.

ಕರ್ನಾಟಕ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ ಅಧ್ಯಕ್ಷತೆ ವಹಿಸಿದ್ದರು. ರೈತ ಸಂಘದ ಕಾರ್ಯಾಧ್ಯಕ್ಷ ಭಕ್ತರಹಳ್ಳಿ ಬೈರೇಗೌಡ, ಶಿರಸಿ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥೆ ರೂಪಾ ಪಾಟೀಲ, ಸಾಮಾಜಿಕ ಕಾರ್ಯಕರ್ತ ಟಿ.ಜೆ.ಅಬ್ರಾಹಂ, ಸಂಘಟನೆಯ ರಾಜ್ಯ ಉಪಾಧ್ಯಕ್ಷರಾದ ಕಲ್ಲೇಶ ಲಿಗಾಡಿ, ಉಮೇಶ ಪಾಟೀಲ, ರೈತ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸತೀಶ ನಾಯ್ಕ, ಡಾ.ಕ್ರೇಶಿ ಬೆಂಗಳೂರು, ರಾಜ್ಯ ಕಾರ್ಯದರ್ಶಿ ಬಾಬು ಹಸನ್, ಕಾರ್ಮಿಕ ನಾಯಕ ಅರುಣಕುಮಾರ ಮತ್ತಿತರರು ಇದ್ದರು. ರಾಜ್ಯ ಕಾರ್ಯದರ್ಶಿ ರಾಘವೇಂದ್ರ ನಾಯ್ಕ ಕಿರವತ್ತಿ ಸ್ವಾಗತಿಸಿದರು.

ಶಿರಸಿ ತಾಲ್ಲೂಕಿನ ಅಂಡಗಿ ಕ್ಯಾದಗಿಕೊಪ್ಪದ ಅವಧೂತ ಕಲ್ಲೇಶ್ವರ ಸ್ವಾಮೀಜಿ ಗುರುಮಠದ ಸಭಾಭವನದಲ್ಲಿ ಆಯೋಜಿಸಿದ್ದ ರೈತ ಕಾರ್ಯಾಗಾರದಲ್ಲಿ ಸಮಾಜದ ವಿವಿಧ ಕ್ಷೇತ್ರದ ಸಾಧಕರನ್ನು ಸನ್ಮಾನಿಸಲಾಯಿತು

Hubballi-Dharwad

**Prajavani Newspaper – 02-06-2025**

ವಿಜಯ ಕರ್ನಾಟಕ

e-paper

# ರೋಗಗಳ ಹತೋಟಿಗೆ ಬೆಳೆ ಪರಿವರ್ತನೆ ಉತ್ತಮ

■ **ವಿಕ ಸುದ್ದಿಲೋಕ** ಚಿತ್ರದುರ್ಗ

ರೈತರು ಒಂದೇ ಬೆಳೆಗೆ ಸೀಮಿತವಾಗುವ ಬದಲು ಬೆಳೆ ಪರಿವರ್ತನೆ ಅನುಸರಿಸಿದರೆ ಬೆಳೆಗಳಿಗೆ ತಗುಲುವ ರೋಗಗಳನ್ನು ಹತೋಟಿಗೆ ತರಬಹುದು, ಅಲ್ಲದೇ ಅಂತರ ಬೆಳೆಗಳನ್ನು ಬೆಳೆಯಬೇಕು ಎಂದು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಓ.ಕುಮಾರ್ ರೈತರಿಗೆ ಸಲಹೆ ನೀಡಿದರು.

ಹೊಳಲ್ಕೆರೆ ತಾಲೂಕಿನ ಆಡನೂರು ಗ್ರಾಮದಲ್ಲಿ ಹಿರಿಯೂರು ಬಬ್ಬೂರಿನ ಕೃಷಿ ವಿಜ್ಞಾನ ಕೇಂದ್ರ, ಶಿವಮೊಗ್ಗದ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಕೃಷಿ, ತೋಟಗಾರಿಕೆ, ಮೀನುಗಾರಿಕೆ, ರೇಷ್ಮೆ ಹಾಗೂ ಅರಣ್ಯ ಇಲಾಖೆ ಸಹಯೋಗದಲ್ಲಿ ಶುಕ್ರವಾರ ಆಯೋಜಿಸಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಹೊಳಲ್ಕೆರೆ ತಾಲೂಕಿನ ಆಡನೂರು ಗ್ರಾಮದಲ್ಲಿ ಆಯೋಜಿಸಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಲಾಯಿತು.

ಜೂನ್ ತಿಂಗಳಲ್ಲಿ ಮುಂಗಾರು ಆರಂಭವಾಗಲಿದ್ದು, ಉಳುಮೆ ಮಾಡುವ ಮೊದಲು ರೈತರು ಮಣ್ಣು ಪರೀಕ್ಷೆ ಮಾಡಿಸಬೇಕು, ಪ್ರತಿ ವರ್ಷ ಅಥವಾ ಮೂರು ವರ್ಷಗಳಿಗೊಮ್ಮೆ ಮಣ್ಣು ಪರೀಕ್ಷೆ ಮಾಡಿಸುವುದು ಕಡ್ಡಾಯ. ಮಣ್ಣು ಪರೀಕ್ಷೆ ಮಾಡಿಸಿ ಮಣ್ಣು ಕಾರ್ಡ್ ಇಟ್ಟುಕೊಳ್ಳಬೇಕು. ಬಳಿಕ ಪ್ರಮಾಣೀಕೃತ, ಸದೃಢ ಬೀಜಗಳನ್ನು ಖರೀದಿಸಿ ಬೀಜೋಪಚಾರ ಮಾಡಿ ಬಿತ್ತನೆ ಮಾಡಬೇಕು ಎಂದು ರೈತರಿಗೆ ಸಲಹೆ ನೀಡಿದರು.

ಹೊಳಲ್ಕೆರೆ ಕೃಷಿ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕ ಎನ್. ಚಂದ್ರ ಕುಮಾರ್, ಮಣ್ಣು ವಿಜ್ಞಾನಿ ಡಾ. ಡಿ.ರವಿ ಕುಮಾರ್ ಮಾತನಾಡಿದರು.

ಕೀಟಶಾಸ್ತ್ರ ವಿಜ್ಞಾನಿ ಓಂಪ್ರಕಾಶ್, ಕೃಷಿ ವಿಸ್ತರಣಾಧಿಕಾರಿ ಡಾ.ಪ್ರೀತಿ, ತೋಟಗಾರಿಕೆ ಇಲಾಖೆಯ ಅಧಿಕಾರಿಗಳು, ಕೃಷಿ ಅಧಿಕಾರಿ ಆಶಾ, ತಾಂತ್ರಿಕ ಸಹಾಯಕ ಗೋಪಿಕೃಷ್ಣ, ರೈತರು ಉಪಸ್ಥಿತರಿದ್ದರು.

**Vijay Karnataka Newspaper – 02-06-2025**

ಪ್ರಜಾ ಪ್ರಗತಿ

# ಕೃಷಿಯಲ್ಲಿ ನೂತನ ಪದ್ಧತಿ ಅಳವಡಿಸಿಕೊಳ್ಳಿ

• ಪ್ರಜಾಪ್ರಗತಿ.ಕಾಂ

ಇಂಡಿ: ಕೃಷಿಯನ್ನು ನೂತನ ಪದ್ಧತಿಗಳ ಅಳವಡಿಕೆ ಯೊಂದಿಗೆ ಲಾಭದಾಯಕ ಉದ್ಯಮವಾಗಿ ಬೆಳೆಸಬೇಕು ಎಂದು ಡಾ. ಬಿ.ಎಸ್ ಗೊಟ್ಯಾಳ ಹೇಳಿದರು.

ತಾಲೂಕಿನ ಆಳೂರ ಗ್ರಾಮದಲ್ಲಿ ಬಸವೇಶ್ವರ ದೇವಸ್ಥಾನ ಆವರಣದಲ್ಲಿ ಕೃಷಿ ವಿಜ್ಞಾನ ಕೇಂದ್ರ ಹೊಸದಿಲ್ಲಿಯ ಭಾರತೀಯ ಕೃಷಿ ಅನುಸಂಧಾನ ಪರಿಷತ್ತು ಕೃಷಿ ಇಲಾಖೆ ಇಫ್ಕೋ ಸಂಸ್ಥೆ ಸಂಯುಕ್ತ ಆಶ್ರಯದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು.

ಡಾ. ಉಮರ ಫಾರುಕ ಮೋಮಿನ ಮಾತನಾಡಿ ಕೃಷಿ ಕ್ಷೇತ್ರದಲ್ಲಿ ನಿರಂತರ ಸಂಶೋಧನೆಗಳು ನಡೆಯಬೇಕು ಹಾಗೂ ಕೃಷಿಯ ಸಮಗ್ರ ಮಾಹಿತಿ ರೈತರಿಗೆ ತಲುಪಬೇಕು ಎಂದರು.

ಕೃಷಿ ಅಧಿಕಾರಿ ಮಹಾಂತೇಶ ಶೆಟ್ಟೆಣ್ಣನವರ ರೈತರು ವಿಭಿನ್ನ ಬೆಳೆಗಳನ್ನು ಬೆಳೆಯಬೇಕು ಎಂದು



ಸಲಹೆ ನೀಡಿದರು. ಡಿಎಪಿ ಗೊಬ್ಬರಕ್ಕೆ ಪರ್ಯಾಯವಾಗಿ ರೈತರು ಸಂಯುಕ್ತ ಗೊಬ್ಬರವನ್ನು ಬಳಸಬೇಕು ಕೃಷಿ ಇಲಾಖೆಯಿಂದ ಗುಣಮಟ್ಟದ ಬೀಜ ಖರೀದಿಸಿ ಉತ್ತಮ ಇಳುವರಿ ಪಡೆಯಬೇಕು ಎಂದರು.

ಡಾ. ಪ್ರಕಾಶ ಮಾತನಾಡಿ ಕೃಷಿ ತಂತ್ರಜ್ಞಾನ ಹಾಗೂ ನ್ಯಾನೋ ತಂತ್ರಜ್ಞಾನ ಮಾಹಿತಿ ನೀಡಿದರು.

ಡಾ. ಪ್ರಸಾದ, ಡಾ. ವೀಣಾ ಚಂದಾವರಿ, ಡಾ ಬಾಲಾಜಿ, ಮತ್ತು ಶ್ರೀ ಮಜೀದ, ರಾಜು ವಾಲಿಕಾರ ಮಾತನಾಡಿದರು.

ಗ್ರಾ.ಪಂ ಅಧ್ಯಕ್ಷ ಅಶೋಕ ನಾಯಕ, ಉಪಾಧ್ಯಕ್ಷ ಹಣಮಂತ ಚಾಬುಕಸವಾರ, ಗ್ರಾಮದ ಮುಖಂಡರಾದ ಪಾಂಡುರಂಗ ಕುಲಕರ್ಣಿ, ಹೊನ್ನಪ್ಪಗೌಡ ಪಾಟೀಲ, ಸಂತೋಷ ಸದಲಾಪುರ, ಬಸುಗೌಡ ಪಾಟೀಲ, ರಾಮನಗೌಡ ಪಾಟೀಲ, ರಾಜಶೇಖರ ನಾಟಿಕಾರ, ಪಿಡಿಒ ಉಮೇಶ ಹೂಗಾರ, ಗ್ರಾ.ಪಂ ಸದಸ್ಯ ರಾದ ಸಿದ್ದು ಚವ್ಹಾಣ ಸಂಜು ಚವ್ಹಾಣ, ಬಸವರಾಜ ವಾಲಿಕಾರ ಮತ್ತಿತರಿದ್ದರು.

Hubli Edition
Jun 01, 2025 Page No. 3
Powered by: erelego.com

**Praja pragathi Newspaper – 01-06-2025**

# ರಸಗೊಬ್ಬರ ಮಣ್ಣಿಗೆ ಮಾರಕ



ಕಲ್ಲುಕಂಬ ಗ್ರಾಮದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಆಯೋಜಿಸಲಾಗಿತ್ತು. ಕೃಷಿ ವಿಜ್ಞಾನಿಗಳಾದ ಮಲ್ಲೇಶಪ್ಪ, ರವಿ, ಜಿಲ್ಲಾ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕಿ ಅಭಿಲಾಶಿ, ಗ್ರಾಪಂ ಅಧ್ಯಕ್ಷ ಮಕಾಶಿ ಬಸವರಾಜ್, ಸದಸ್ಯರಾದ ಅಡ್ಡೆ ಶಿವಪ್ಪ, ಎಚ್ ಮಲ್ಲೇಶಪ್ಪ, ಪಿಡಿಒ ದೇವರಾಜ್ ಇತರರಿದ್ದರು.

■ ಕೃಷಿ ವಿಜ್ಞಾನಿ ಮಲ್ಲೇಶಪ್ಪ ಹೇಳಿಕೆ

**ಕುರುಗೋಡು:** ಬೆಳೆಗೆ ಬಾಧಿಸುವ ರೋಗ ನಿವಾರಣೆಗೆ ರೈತರು ಕೃಷಿ ವಿಜ್ಞಾನ ಕೇಂದ್ರದಲ್ಲಿ ಸಮಗ್ರ ಮಾಹಿತಿ ಪಡೆಯಬೇಕು. ಈ ಮೂಲಕ ಬೇಸಾಯ ಮಾಡುವುದರಿಂದ ರೈತರು ನಷ್ಟ ಹೊಂದುವುದು ತಪ್ಪಲಿದೆ ಎಂದು ಹಗರಿ ಕೆವಿಕೆ ವಿಜ್ಞಾನಿ ಮಲ್ಲೇಶಪ್ಪ ಮಾಹಿತಿ ನೀಡಿದರು.

ಕಲ್ಲುಕಂಬ ಗ್ರಾಮ ಪಂಚಾಯಿತಿ ಯಲ್ಲಿ ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಬಳ್ಳಾರಿಯ ಹಗರಿ ಕೃಷಿ ವಿಜ್ಞಾನ ಕೇಂದ್ರ, ಭಾರತೀಯ ಭೂ ಮತ್ತು ಜಲ ಸಂರಕ್ಷಣ ಸಂಸ್ಥೆ ಸಂಶೋಧನಾ ಕೇಂದ್ರ, ಕಂಪ್ಲಿಯ ಜಿಲ್ಲಾ ತರಬೇತಿ ಕೇಂದ್ರದಿಂದ ಆಯೋಜಿಸಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನದಲ್ಲಿ ಬುಧವಾರ ಮಾತನಾಡಿದರು. ತಾಲೂಕಿನಲ್ಲಿ ಮೆಣಸಿನಕಾಯಿ, ಅಂಜೂರ, ದಾಳಿಂಬೆ, ಭತ್ತವನ್ನು ಹೆಚ್ಚಾಗಿ ಬೆಳೆಯಲಾಗುತ್ತಿದೆ. ರೈತರು ಅಧಿಕ ಇಳುವರಿ ಪಡೆಯಲು ಅವೈಜ್ಞಾನಿಕವಾಗಿ ರಸಗೊಬ್ಬರ, ಕೀಟನಾಶಕ ಸಿಂಪಡಣೆ ಮಾಡುತ್ತಿದ್ದಾರೆ. ಇದರಿಂದ ಮಣ್ಣಿನ ಫಲವತ್ತತೆ ಕುಸಿಯುವ ಜತೆಗೆ ಜನರ ಆರೋಗ್ಯದ ಮೇಲೆ ಅಡ್ಡ ಪರಿಣಾಮ ಬೀರಲಿದೆ. ಕೊಟ್ಟಿಗೆ ಗೊಬ್ಬರ, ಜೀವಾಮೃತ ಹೆಚ್ಚಾಗಿ ಬಳಸುವಂತೆ ತಿಳಿಸಿದರು.

ಕೃಷಿ ವಿಜ್ಞಾನಿ ರವಿ ಮಾತನಾಡಿ, ಭೂಮಿಯಲ್ಲಿ ಸೂಕ್ಷ್ಮಾಣು ಜೀವಿಗಳ ಸಂಖ್ಯೆ ಹೆಚ್ಚಾಗಿರುವುದರಿಂದ ಭೂಮಿಯ ಫಲವತ್ತತೆ ಹೆಚ್ಚುತ್ತದೆ. ಅದಕ್ಕಾಗಿ ರೈತರು ರಾಸಾಯನಿಕ ಪದ್ಧತಿ ಬಿಟ್ಟು ಸಹಜ ಬೇಸಾಯದ ಕಡೆಗೆ ಹೆಚ್ಚು ಆಸಕ್ತಿ ಬೆಳಸಿಕೊಳ್ಳಬೇಕು ಎಂದರು. ಜಿಲ್ಲಾ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕಿ ಅಭಿಲಾಶಿ, ಗ್ರಾಪಂ ಅಧ್ಯಕ್ಷ ಮಕಾಶಿ ಬಸವರಾಜ್, ಸದಸ್ಯರಾದ ಅಡ್ಡೆ ಶಿವಪ್ಪ, ಎಚ್ ಮಲ್ಲೇಶಪ್ಪ, ಅಧಿಕಾರಿಗಳಾದ ರಾಜೇಶ್ವರಿ, ಯೇಸುದಾಸ್, ದೇವರಾಜ್, ಪ್ರಮುಖರಾದ ಜಿ.ಪಂಪಣ್ಣ, ಜಿ.ನಾಗರಾಜ್, ಶಿವಪ್ಪ, ಪಂಪನಗೌಡ ಇತರರಿದ್ದರು.

# ಸಮಸ್ಯೆ ಪರಿಹರಿಸಿಕೊಂಡು ಸ್ವಾವಲಂಬನೆ ಸಾಧಿಸಿ

**ಕಂಪ್ಲಿ:** ಕೃಷಿ ಜ್ಞಾನವನ್ನು ನೇರವಾಗಿ ರೈತರ ಬಳಿಗೆ ಕೊಂಡೊಯ್ಯುವುದು ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ಕೆವಿಕೆ ಹಿರಿಯ ವಿಜ್ಞಾನಿ ಡಾ.ಪಿ.ಪಾಲಯ್ಯ ಹೇಳಿದರು.

ತಾಲೂಕಿನ ಎಮ್ಮಿಗನೂರು ಗ್ರಾಮದಲ್ಲಿ ಮಂಗಳವಾರ ವಿಕಸಿತ ಕೃಷಿ ಸಂಕಲ್ಪ ಅಭಿಯಾನದಲ್ಲಿ ಮಾತನಾಡಿದರು.

■ ವಿಜ್ಞಾನಿ ಡಾ.ಪಿ. ಪಾಲಯ್ಯ ಸಲಹೆ

ರೈತರು ಕೃಷಿಯಲ್ಲಿ ಸ್ವಾವಲಂಬನೆ ಸಾಧಿಸಲು ಸಮಸ್ಯೆಗಳನ್ನು ವಿಜ್ಞಾನಿಗಳಿಗೆ ತಲುಪಿಸಬೇಕಿದೆ. ಹಗರಿಯ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ಮತ್ತು ಕೃಷಿ ಇಲಾಖೆ ಅಧಿಕಾರಿಗಳ ತಂಡ ಜೂ.12 ರವರೆಗೆ ಜಿಲ್ಲೆಯ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ರೈತರಿಗೆ ಕೃಷಿ ಜ್ಞಾನ ಕುರಿತು ತಿಳಿವಳಿಕೆ ನೀಡಲಿದೆ. ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಬೆಂಗಳೂರಿನ ನ್ಯಾಷನಲ್ ಬ್ಯೂರೋ ಆಫ್ ಅಗ್ರಿಕಲ್ಚರಲ್ ಇನ್‌ಸೆಕ್ಟ್ ರಿಸರ್ಚ್ ವಿಜ್ಞಾನಿ ಡಾ.ಡೇವಿಡ್ ಕೆ.ಜೆ ಭತ್ತದ ಬೆಳೆಯಲ್ಲಿ ಸಮಗ್ರ ರೋಗ ಹಾಗೂ ಕೀಟ ನಿಯಂತ್ರಣ ಜತೆಗೆ ಸಾವಯವ ಕೃಷಿ ಪದ್ಧತಿಯಲ್ಲಿ ಜೈವಿಕ ಕೀಟನಾಶಕ ಹಾಗೂ ಸಸ್ಯಜನ್ಯ ಪಿಡೇನಾಶಕಗಳ ಬಳಕೆಯ ಬಗ್ಗೆ ರೈತರಿಗೆ ತಿಳಿಸಿದರು. ವಿಜ್ಞಾನಿಗಳಾದ ಡಾ.ಪಿ.ನವೀನ್ ಕುಮಾರ್, ಕಂಪ್ಲಿ ರೈತ ಸಂಪರ್ಕ ಕೇಂದ್ರದ ಸಹಾಯಕ ಕೃಷಿ ಅಧಿಕಾರಿ ಟಿ.ಜ್ಯೋತಿ ಇತರರಿದ್ದರು.



ಎಮ್ಮಿಗನೂರಿನಲ್ಲಿ ಆಯೋಜಿಸಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನದಲ್ಲಿ ಕೆವಿಕೆ ಹಿರಿಯ ವಿಜ್ಞಾನಿ ಡಾ.ಪಿ.ಪಾಲಯ್ಯ ಮಾತನಾಡಿದರು. ಪ್ರಮುಖರಾದ ಡಾ.ನವೀನ್‌ಕುಮಾರ್, ಟಿ.ಜ್ಯೋತಿ, ಡಾ.ಡೇವಿಡ್ ಕೆ.ಜೆ., ರೈತರು ಇದ್ದರು.

ಕನ್ನಡಪ್ರಭ

**ರೈತರಿಗೆ ಸಲಹೆ** | ವಿಕಸಿತ ಕೃಷಿ ಸಂಕಲ್ಪ ಅಭಿಯಾನದಲ್ಲಿ ತಾಪಂ ಕಾರ್ಯನಿರ್ವಹಣಾಧಿಕಾರಿ ನಾಗಮಣಿ ಸಲಹೆ

# ರೈತರು ಆಧುನಿಕ ಕೃಷಿ ಪದ್ಧತಿ ಅಳವಡಿಸಿಕೊಳ್ಳಬೇಕು

• **ಕನ್ನಡಪ್ರಭ ವಾರ್ತೆ** ಗುಡಿಬಂಡೆ

ದೇಶದ ಆರ್ಥಿಕತೆಯ ಬೆನ್ನೆಲುಬು ರೈತರು. ಆದರೆ ಇಂದು ರೈತರು ಹಳೇಯ ಕೃಷಿ ಪದ್ಧತಿಗಳನ್ನು ಬಿಟ್ಟು ಆಧುನಿಕ ಕೃಷಿ ಪದ್ಧತಿಗಳನ್ನು ಬಳಸಿಕೊಂಡು ಆರ್ಥಿಕವಾಗಿ ಅಭಿವೃದ್ಧಿ ಹೊಂದಬೇಕು ಎಂದು ತಾಲೂಕು ಪಂಚಾಯತಿ ಇಒ ನಾಗಮಣಿ ಸಲಹೆ ನೀಡಿದರು.

ತಾಲೂಕಿನ ವಿವಿಧ ಗ್ರಾಪಂ ಕೇಂದ್ರಗಳಲ್ಲಿ ಚಿಂತಾಮಣಿಯ ಕೃಷಿ ವಿಜ್ಞಾನ ಕೇಂದ್ರ ಹಾಗೂ ಕೃಷಿ, ತೋಟಗಾರಿಕೆ, ಪಶುಸಂಗೋಪನೆ ಇಲಾಖೆಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಎಂಬ ಕಾರ್ಯಕ್ರಮದಲ್ಲಿ ಮಾತನಾಡಿದರು.

**ಯಾಂತ್ರೀಕರಣ:** ರೈತರು ಆಧು ನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳಬೇಕು. ಕೃಷಿಯಲ್ಲಿ ಯಾಂತ್ರೀಕರಣ ಬಳಸಿಕೊಂಡು ಅಧಿಕ ಇಳುವರಿ, ಸಮಯವನ್ನು ಉಳಿಸುವಂತಹ ಕೆಲಸ ಮಾಡಬೇಕು. ಕೇವಲ ಒಂದೇ ಬೆಳೆಯನ್ನು ಬೆಳೆಯದೇ ವಿವಿಧ ಬೆಳೆಗಳನ್ನು ಬೆಳೆಯಬೇಕು. ಇದೆಲ್ಲದರ ಜೊತೆಗೆ ಸಾವಯವ ಕೃಷಿ ಪದ್ಧತಿಗಳು, ಕೈ ತೋಟ ಹಾಗೂ ಸುಸ್ಥಿರ ಕೃಷಿ ಪದ್ಧತಿ ಅಳವಡಿಸಿಕೊಂಡಾಗ ರೈತರು ಅಭಿವೃದ್ಧಿಯಾಗಬಹುದು ಎಂದರು.

ಬಳಿಕ ಕೃಷಿ ವಿಜ್ಞಾನ ಕೇಂದ್ರದ ಡಾ.ತನ್ವೀರ್ ಅಹ್ಮದ್ ತೊಗರಿ ಹಾಗೂ ಟೊಮೋಟೊ ಬೆಳೆ ಬಗ್ಗೆ ಮಾಹಿತಿ ನೀಡಿ, ರೈತರು ಯಾವುದೇ ಬೆಳೆಯನ್ನು ಇಡುವ ಸಮಯದಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳು ಅಥವಾ ವಿಜ್ಞಾನಿಗಳ ಸಲಹೆ ಪಡೆಯಬೇಕು. ಅವರಲ್ಲಿ ತಾವು ಬೆಳೆಯುವಂತಹ ಬೆಳೆಯ ಬಗ್ಗೆ ಸಮರ್ಪಕ ಮಾಹಿತಿಯನ್ನು ಪಡೆದು ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಬೇಕು ಎಂದರು.



ಗುಡಿಬಂಡೆಯಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಹಮ್ಮಿಕೊಳ್ಳಲಾಗಿತ್ತು.

**ಬಿತ್ತನೆಗೆ ಮನ್ನ ಮಣ್ಣು ಪರೀಕ್ಷೆ:** ಮಣ್ಣು ವಿಜ್ಞಾನಿಗಳಾದ ಡಾ.ಸಂಧ್ಯಾ ಮಾತನಾಡಿ, ರೈತರು ಕೃಷಿ ಚಟುವಟಿಕೆಗಳನ್ನು ಕೈಗೊಳ್ಳುವ ಮುನ್ನಾ ತಮ್ಮ ಜಮೀನನಲ್ಲಿನ ಮಣ್ಣನ್ನು ಪರೀಕ್ಷೆ ಮಾಡಿಸಿಕೊಳ್ಳಬೇಕು. ರೈತರು ಮಣ್ಣು ಪರೀಕ್ಷೆ ಮಾಡಿಸಿ ಅದರ ವರದಿಯಂತೆ ಪೋಷಕಾಂಶಗಳನ್ನು ನಿರ್ವಹಣೆ ಮಾಡಬೇಕು ಎಂದರು.

ವಿಜ್ಞಾನಿ ಡಾ.ಶ್ರೀರಾಮ್ ಕುಮಾರ್ ಪರಿಸರ ಸ್ನೇಹಿ ಕೀಟ ನಿರ್ವಹಣಾ ತಾಂತ್ರಿಕತೆಗಳ ಕುರಿತು ಹಾಗೂ ಗುಡಿಬಂಡೆ ಸಹಾಯಕ ಕೃಷಿ ನಿರ್ದೇಶಕ ಕೇಶವರೆಡ್ಡಿ ಕೃಷಿ ಇಲಾಖೆಯಿಂದ ಸಿಗುವಂತಹ ಸೌಲಭ್ಯಗಳ ಕುರಿತು, ತೋಟಗಾರಿಕೆ ಇಲಾಖೆಯ ಅಧಿಕಾರಿ ದಿವಾಕರ್ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಇದೇ ಸಮಯದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಹೆಚ್.ಪಿ.ರಾಮನಾಥ್ ಹಾಗೂ ಕೃಷಿಕ ಸಮಾಜದ ತಾಲೂಕು ಅಧ್ಯಕ್ಷ ಮಂಜುನಾಥ್, ವಿವಿಧ ಗ್ರಾಪಂಗಳ ಅಧ್ಯಕ್ಷರು, ಉಪಾಧ್ಯಕ್ಷರುಗಳು, ಸದಸ್ಯರು ಇದ್ದರು.

KOLAR Edition
Jun 09, 2025 Page No. 02
Powered by: erelego.com

Kannada prabha – 09-06-2025

# ಪ್ರಜಾ ಪ್ರಗತಿ

ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಮೂಲಕ ವಿಜ್ಞಾನಿಗಳು ರೈತರ ಮನೆಯ ಬಾಗಿಲಿಗೆ

## ಜಾನುವಾರು ಸಂಪತ್ತು ಹೆಚ್ಚಿಸಿ, ಸಾವಯವ ಕೃಷಿಗೆ ಆದ್ಯತೆ ನೀಡಿ




ರೈತರು ಪಶುಸಂಗೋಪಣೆ ಮಾಡಬೇಕು, ಜಾನುವಾರುಗಳಿಗೆ ಮುಂಜಾಗ್ರತಾ ಕ್ರಮವಾಗಿ ಲಸಿಕೆ ಹಾಕಿಸಬೇಕು, ಧಾರವಾಡ ಮೇವು ಸಂಶೋಧನಾ ಸಂಸ್ಥೆಯಿಂದ ಹಲವಾರು ಮೇವಿನ ತಳಿಗಳನ್ನು ಅಭಿವೃದ್ಧಿಪಡಿಸಲಾಗಿದ್ದು, ಅವುಗಳ ಸದುಪಯೋಗ ಪಡೆಯಬೇಕೆಂದರು.

| ಡಾ.ಬಿ.ಜೆ.ಶಿವಕುಮಾರ, ಪ್ರಧಾನ ವಿಜ್ಞಾನಿ

● ಪ್ರಜಾಪ್ರಗತಿ.ಕಾಂ

ವಿಜಯಪುರ: ರೈತರಿಗೆ ಆಧುನಿಕ ಕೃಷಿ ತಂತ್ರಜ್ಞಾನ ಮಾಹಿತಿ ನೀಡಲು ವಿಜ್ಞಾನಿಗಳೇ ರೈತರ ಮನೆಯ ಬಾಗಿಲಿಗೆ ಬರುತ್ತಿದ್ದು, ಎಲ್ಲರೂ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಧಾರವಾಡ ಕೃಷಿ ವಿವಿ ಕುಲಪತಿ ಡಾ.ಪಿ.ಎಲ್.ಪಾಟೀಲ ಹೇಳಿದರು.

ಅವರು ಬಾಗಲಕೋಟೆ ಕೃಷಿ ವಿಜ್ಞಾನ ಕೇಂದ್ರ, ತೋಟಗಾರಿಕೆ ವಿಶ್ವವಿದ್ಯಾಲಯ ಹಾಗೂ ಕೃಷಿ, ತೋಟಗಾರಿಕೆ ಮತ್ತು ಸಂಬಂಧಿತ ಇಲಾಖೆಗಳು ಬಾಗಲಕೋಟೆ ಇವರ ಸಂಯುಕ್ತ ಆಶ್ರಯದಲ್ಲಿ ಬಾದಾಮಿ ತಾಲೂಕಿನ ಖಾನಾಪುರ ಎಸ್.ಕೆ. ಗ್ರಾಮದಲ್ಲಿ ಆಯೋಜಿಸಲಾದ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ'ಕ್ಕೆ ಚಾಲನೆ ನೀಡಿ ಮಾತನಾಡಿದರು.

ಈ ಸಲ ಮುಂಗಾರು ಹಂಗಾಮು ಉತ್ತಮವಾಗಿ ಆರಂಭವಾಗಿದ್ದು, ರೈತಬಾಂಧವರು ಅಗತ್ಯ ಪರಿಕರ ಸಿದ್ಧಮಾಡಿಕೊಳ್ಳಬೇಕು. ವಿಜ್ಞಾನಿಗಳ ಸಲಹೆ ಪಡೆದು ಬೇಸಾಯ ಕೈಗೊಳ್ಳಬೇಕು, ತಮ್ಮ ಆದಾಯ ದ್ವಿಗುಣಗೊಳಿಸಿಕೊಳ್ಳಬೇಕು, ಜಾನುವಾರು ಸಂಪತ್ತು ಹೆಚ್ಚಿಗೆ ಮಾಡಿಕೊಳ್ಳಬೇಕು. ಸಾವಯವ ಕೃಷಿಗೆ ಹೆಚ್ಚಿನ ಆದ್ಯತೆ ನೀಡಬೇಕೆಂದರು.

ವಿಸ್ತರಣಾ ನಿರ್ದೇಶಕ ಡಾ.ಎಮ್.ವಿ.ಮಂಜುನಾಥ ಮಾತನಾಡಿ, ರೈತರು ಮಳೆಯ ನೀರನ್ನು ಕೃಷಿ ಹೊಂಡ, ಚೆಕ್ ಡ್ಯಾಂ ಗಳಲ್ಲಿ ಸಂಗ್ರಹಿಸಿಟ್ಟುಕೊಳ್ಳಬೇಕು. ಮಣ್ಣು ಮತ್ತು ನೀರು ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕೆಂದರು.

ಪ್ರಾಧ್ಯಾಪಕ ಡಾ.ಸಿ.ಆರ್.ಪಾಟೀಲ ಮಾತನಾಡಿ, ರೈತರು ಜೈವಿಕ ಗೊಬ್ಬರ ಬಳಕೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಬೆಳೆಗಳಿಗೆ ತಪ್ಪದೇ ಬೀಜೋಪಚಾರ ಮಾಡಬೇಕೆಂದರು.

ಉಪ ಕೃಷಿ ನಿರ್ದೇಶಕ ಡಾ.ಎಲ್.ಆಯ್. ರೂಡಗಿಯವರು ಕೃಷಿ ಇಲಾಖೆಯ ವಿವಿಧ ಯೋಜನೆಗಳ ಕುರಿತು ಮಾಹಿತಿ ನೀಡಿದರು.

ಸಹ ವಿಸ್ತರಣಾ ನಿರ್ದೇಶಕ ಡಾ.ರವೀಂದ್ರ ಬೆಳ್ಳಿ, ತೋ.ವಿ.ವಿ. ಪ್ರಾಧ್ಯಾಪಕ ಡಾ. ಶಶಿಕುಮಾರ ಎಸ್., ವಿಜ್ಞಾನಿ ಡಾ.ಎನ್. ಎನ್.ರಾಜಗೋಪಾಲ ರವರು ರೈತರನ್ನು ಉದ್ದೇಶಿಸಿ ಮಾತನಾಡಿದರು.

ಹಿರಿಯ ವಿಜ್ಞಾನಿ ಡಾ. ಗುರುದತ್ತ ಎಮ್. ಹೆಗಡೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಗ್ರಾಮ ಪಂಚಾಯತ ಅಧ್ಯಕ್ಷೆ ಶ್ರೀಮತಿ ರೇಣುಕಾ ವಿ.ಹಿರಗಣ್ಣವರ ಅಧ್ಯಕ್ಷತೆ ವಹಿಸಿದ್ದರು. ಡಾ.ಸಿದ್ದಪ್ಪ ಬಿ.ಅಂಗಡಿ ಕಾರ್ಯಕ್ರಮ ನಿರೂಪಿಸಿದರು. ಡಾ.ಭವ್ಯಾ ಎಮ್.ಆರ್.ವಂದಿಸಿದರು. ವಿಜ್ಞಾನಿಗಳಾದ ಡಾ.ಕುಶಾಲ್, ಡಾ.ವೆಂಕಣ್ಣ ಬಳಗಾನೂರ, ಡಾ.ರಮಿತಾ. ಬಿ.ಇ., ಗ್ರಾಮ ಪಂಚಾಯತ ಸದಸ್ಯರಾದ ಲಲಿತಾ ಯ ಪೂಜಾರಿ, ಶೇಖಪ್ಪ ಯ. ಪವಾಡಿನಾಯ್ಕರ್, ಲಕ್ಷ್ಮಣ ಕೆ ದಾದನಟ್ಟಿ ಸೇರಿದಂತೆ ಕೃಷಿ, ತೋಟಗಾರಿಕೆ, ಪಶುಸಂಗೋಪಣೆ ಅಧಿಕಾರಿಗಳು, ಪ್ರಗತಿಪರ ರೈತರು, ರೈತ ಮಹಿಳೆಯರು, ಕೃಷಿ ಸಖಿಯರು ಭಾಗವಹಿಸಿದ್ದರು.


Hubli Edition
Jun 10, 2025 Page No. 3
Powered by: erelego.com


**Praja pragathi Newspaper – 10-06-2025**

# ಗುಮ್ಮಟ GN ನಗರಿ


gn all (2)-page-008
10 Jun 2025


ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಮೂಲಕ ವಿಜ್ಞಾನಿಗಳು ರೈತರ ಮನೆಯ ಬಾಗಿಲಿಗೆ

## ರೈತರು ಜಾನುವಾರು ಸಂಪತ್ತು ಹೆಚ್ಚಿಸಿ: ಡಾ. ಪಿ.ಎಲ್. ಪಾಟೀಲ

ಗುಮ್ಮಟ ನಗರಿ ನ್ಯೂಸ್ >>

ಬಿಜಾಪುರ: ರೈತರಿಗೆ ಆಧುನಿಕ ಕೃಷಿ ತಂತ್ರಜ್ಞಾನ ಮಾಹಿತಿ ನೀಡಲು ವಿಜ್ಞಾನಿಗಳೇ ರೈತರ ಮನೆಯ ಬಾಗಿಲಿಗೆ ಬರುತ್ತಿದ್ದು, ಎಲ್ಲರೂ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಧಾರವಾಡ ಕೃಷಿ ವಿವಿ ಕುಲಪತಿ ಡಾ. ಪಿ. ಎಲ್. ಪಾಟೀಲ, ಹೇಳಿದರು.

ಬಾಗಲಕೋಟೆ ಕೃಷಿ ವಿಜ್ಞಾನ ಕೇಂದ್ರ, ತೋಟಗಾರಿಕೆ ವಿಶ್ವವಿದ್ಯಾಲಯ ಹಾಗೂ ಕೃಷಿ, ತೋಟಗಾರಿಕೆ ಮತ್ತು ಸಂಬಂಧಿತ ಇಲಾಖೆಗಳು ಬಾಗಲಕೋಟೆ ಇವರ ಸಂಯುಕ್ತ ಆಶ್ರಯದಲ್ಲಿ ಬದಾಮಿ ತಾಲೂಕಿನ ಖಾನಾಪುರ ಎಸ್. ಕೆ. ಗ್ರಾಮದಲ್ಲಿ ಆಯೋಜಿಸಲಾದ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ' ಕ್ಕೆ ಚಾಲನೆ ನೀಡಿ ಅವರು ಮಾತನಾಡಿ, ಈ ಸಲ ಮುಂಗಾರು ಹಂಗಾಮು ಉತ್ತಮವಾಗಿ ಆರಂಭವಾಗಿದ್ದು, ರೈತಬಾಂಧವರು ಅಗತ್ಯ ಪರಿಕರ ಸಿದ್ದಮಾಡಿಕೊಳ್ಳಬೇಕು. ವಿಜ್ಞಾನಿಗಳ ಸಲಹೆ ಪಡೆದು ಬೇಸಾಯ ಕೈಗೊಳ್ಳಬೇಕು, ತಮ್ಮ ಆದಾಯ ದ್ವಿಗುಣಗೊಳಿಸಿಕೊಳ್ಳಬೇಕು, ಜಾನುವಾರು ಸಂಪತ್ತು ಹೆಚ್ಚಿಗೆ ಮಾಡಿಕೊಳ್ಳಬೇಕು, ಸಾವಯವ



ಕೃಷಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು. ವಿಸ್ತರಣಾ ನಿರ್ದೇಶಕ ಡಾ. ಎಮ್. ವಿ. ಮಂಜುನಾಥ ಮಾತನಾಡಿ, ರೈತರು ಮಳೆಯ ನೀರನ್ನು ಕೃಷಿ ಹೊಂಡ, ಚೆಕ್ ಡ್ಯಾಂ ಗಳಲ್ಲಿ ಸಂಗ್ರಹಿಸಿಟ್ಟುಕೊಳ್ಳಬೇಕು. ಮಣ್ಣು ಮತ್ತು ನೀರು ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ಪ್ರಾಧ್ಯಾಪಕ ಡಾ. ಸಿ. ಆರ್. ಪಾಟೀಲ, ಮಾತನಾಡಿ, ರೈತರು ಜೈವಿಕ ಗೊಬ್ಬರ ಬಳಕೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಬೆಳೆಗಳಿಗೆ ತಪ್ಪದೇ ಬೀಜೋಪಚಾರ ಮಾಡಬೇಕೆಂದರು.

ಪ್ರಧಾನ ವಿಜ್ಞಾನಿ ಡಾ. ಬಿ. ಜೆ. ಶಿವಕುಮಾರ ಮಾತನಾಡಿ, ರೈತರು ಪಶುಸಂಗೋಪಣೆ ಮಾಡಬೇಕು, ಜಾನುವಾರುಗಳಿಗೆ ಮುಂಜಾಗ್ರತಾ ಕ್ರಮವಾಗಿ ಲಸಿಕೆ ಹಾಕಿಸಬೇಕು, ಧಾರವಾಡ ಮೇವು ಸಂಶೋಧನಾ ಸಂಸ್ಥೆಯಿಂದ ಹಲವಾರು ಮೇವಿನ ತಳಿಗಳನ್ನು ಅಭಿವೃದ್ಧಿಪಡಿಸಲಾಗಿದ್ದು, ಅವುಗಳ ಸದುಪಯೋಗ ಪಡೆಯಬೇಕೆಂದರು. ಉಪ ಕೃಷಿ ನಿರ್ದೇಶಕ ಡಾ. ಎಲ್. ಆಯ್. ರೂಡಗಿಯವರು ಕೃಷಿ ಇಲಾಖೆಯ ವಿವಿಧ ಯೋಜನೆಗಳ ಕುರಿತು ಮಾಹಿತಿ ನೀಡಿದರು.

ಮುಖ್ಯ ಅತಿಥಿಗಳಾಗಿ ಸಹ ವಿಸ್ತರಣಾ ನಿರ್ದೇಶಕ ಡಾ. ರವೀಂದ್ರ ಬೆಳ್ಳಿ, ತೋ.ವಿ.ವಿ. ಪ್ರಾಧ್ಯಾಪಕ ಡಾ. ಶಶಿಕುಮಾರ ಎಸ್., ವಿಜ್ಞಾನಿ ಡಾ. ಎನ್. ಎನ್. ರಾಜಗೋಪಾಲ ರವರು ರೈತರನ್ನು ಉದ್ದೇಶಿಸಿ ಮಾತನಾಡಿದರು.

ಹಿರಿಯ ವಿಜ್ಞಾನಿ ಡಾ. ಗುರುದತ್ತ ಎಮ್. ಹೆಗಡೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಗ್ರಾಮ ಪಂಚಾಯತ ಅಧ್ಯಕ್ಷೆ ಶ್ರೀಮತಿ ರೇಣುಕಾ ವಿ. ಹಿರಗಣ್ಣವರ ಅಧ್ಯಕ್ಷತೆ ವಹಿಸಿದ್ದರು. ವಿಜ್ಞಾನಿಗಳಾದ ಡಾ. ಕುಶಾಲ್, ಡಾ. ವೆಂಕಣ್ಣ ಬಳಗಾನೂರ, ಡಾ. ರಮಿತಾ. ಬಿ.ಇ., ಗ್ರಾಮ ಪಂಚಾಯತ ಸದಸ್ಯರಾದ ಲಲಿತಾ ಯ ಪೂಜಾರಿ, ಶೇಖಪ್ಪ ಯ. ಪವಾಡಿನಾಯ್ಕರ, ಲಕ್ಷ್ಮಣ ಕೆ ದಾದನಟ್ಟಿ ಸೇರಿದಂತೆ ಕೃಷಿ, ತೋಟಗಾರಿಕೆ, ಪಶುಸಂಗೋಪಣೆ ಅಧಿಕಾರಿಗಳು, ಪ್ರಗತಿಪರ ರೈತರು, ರೈತ ಮಹಿಳೆಯರು, ಕೃಷಿ ಸಖಿಯರು ಭಾಗವಹಿಸಿದ್ದರು. ಡಾ. ಸಿದ್ದಪ್ಪ ಬಿ. ಅಂಗಡಿ ಕಾರ್ಯಕ್ರಮ ನಿರೂಪಿಸಿದರು. ಡಾ. ಭವ್ಯಾ ಎಮ್. ಆರ್. ವಂದಿಸಿದರು.

ಪ್ರಜಾವಾಣಿ

# ವಿಕಸಿತ ಕೃಷಿ ಸಂಕಲ್ಪ ಅಭಿಯಾನ

ಪ್ರಜಾವಾಣಿ ವಾರ್ತೆ

**ಶಿಡ್ಲಘಟ್ಟ:** ತಾಲ್ಲೂಕಿನ ಹಂಡಿಗನಾಳ ಗ್ರಾಮ ಪಂಚಾಯಿತಿಯಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನವನ್ನು ಸೋಮವಾರ ಹಮ್ಮಿಕೊಳ್ಳಲಾಗಿತ್ತು.

ಕೃಷಿ ವಿಜ್ಞಾನ ಕೇಂದ್ರದ (ಬೇಸಾಯ ಶಾಸ್ತ್ರ) ವಿಜ್ಞಾನಿ ವಿಶ್ವನಾಥ್ ಕಾರ್ಯಕ್ರಮದಲ್ಲಿ ಸಾವಯವ ಕೃಷಿ ಬಗ್ಗೆ ಮಾಹಿತಿ ನೀಡಿದರು. ತೋಟಗಾರಿಕಾ ವಿಜ್ಞಾನಿ ಪ್ರವೀಣ್ ಕುಮಾರ. ಆರ್ ಅವರು ತೋಟಗಾರಿಕಾ ಬೆಳೆಗಳಲ್ಲಿ ಇರುವ ನೂತನ ತಂತ್ರಜ್ಞಾನಗಳ ಬಗ್ಗೆ ಮಾಹಿತಿಯನ್ನು ಹಂಚಿಕೊಂಡರು. ಗೃಹ ವಿಜ್ಞಾನ ವಿಜ್ಞಾನಿ ಸೌಮ್ಯ ಹಿರೇಗೌಡರ್ ತರಕಾರಿ ಬೆಳೆಗಳ ಕಟಾವು ಮತ್ತು ಸಂಸ್ಕರಣೆ ಬಗ್ಗೆ ವಿವರಿಸಿದರು.



ಶಿಡ್ಲಘಟ್ಟ ತಾಲ್ಲೂಕಿನ ಹಂಡಿಗನಾಳ ಗ್ರಾಮ ಪಂಚಾಯಿತಿಯಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ಅಂಗವಾಗಿ ರೈತರಿಗೆ ಮಾಹಿತಿ ನೀಡಲಾಯಿತು

ರೈತ ಎ.ಎಂ.ತ್ಯಾಗರಾಜ್ ಅವರು ಸುಸ್ಥಿರ ಕೃಷಿಗೆ ಸಾವಯವ ಕೃಷಿ ಮಹತ್ವವನ್ನು ರೈತರಿಗೆ ಮನವರಿಕೆ ಮಾಡಿಕೊಟ್ಟರು. ಜೀವಾಮೃತ, ಬೀಜಾಮೃತ, ಪಂಚಗವ್ಯ, ಹಸಿರೆಲೆ ಗೊಬ್ಬರದ ಮಹತ್ವ, ಮಣ್ಣು ಪರೀಕ್ಷೆ, ಪರಿಸರ ಸ್ನೇಹಿ ರೋಗ ಮತ್ತು ಕೀಟ ನಿರ್ವಹಣೆ, ಕೃಷಿ ವಿಶ್ವವಿದ್ಯಾಲಯದ ಬೀಜಗಳ ಆಯ್ಕೆ, ಬೀಜೋಪಚಾರ ಮತ್ತು ಇತರ ತಂತ್ರಜ್ಞಾನಗಳ ಬಗ್ಗೆ ಮಾಹಿತಿಯನ್ನು ರೈತರಿಗೆ ತಿಳಿಸಿಕೊಟ್ಟರು.

ರೈತ ಮುನೇಂದ್ರ ಉತ್ತಮ ಬೆಳೆಗೆ ಬೀಜದ ಆಯ್ಕೆ ಮುಖ್ಯ ಎಂದು ರೈತರಿಗೆ ಹೇಳಿದರು.

ಕೃಷಿ ಇಲಾಖೆ, ರೇಷ್ಮೆ ಇಲಾಖೆ ಮತ್ತು ತೋಟಗಾರಿಕಾ ಇಲಾಖೆ ಅಧಿಕಾರಿಗಳು ಇಲಾಖೆ ಯೋಜನೆಗಳ ಬಗ್ಗೆ ಮತ್ತು ಬೆಳೆ ವಿಮೆಯ ಬಗ್ಗೆ ಮಾಹಿತಿ ನೀಡಿದರು.

[redacted]

**Prajavani- 10-06-2025**

VK ವಿಜಯ ಕರ್ನಾಟಕ e-paper

X

ಕೃಷಿ ತಜ್ಞರಿಂದ ರೈತರಿಗೆ ತೋಟಗಾರಿಕೆ ಬೆಳೆಗಳ ಆರೈಕೆ, ಗೊಬ್ಬರ ಪ್ರಮಾಣ, ಮಾರುಕಟ್ಟೆ ವಿವರ

# ಹಂಡಿಗನಾಳದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ

**ವಿಕ ಸುದ್ದಿಲೋಕ** ಶಿಡ್ಲಘಟ್ಟ

ಸಾವಯುವ ಕೃಷಿ ಮಾಡುವುದರಿಂದ ಭೂಮಿಯ ಫಲವತ್ತತೆ ಹೆಚ್ಚುವುದಷ್ಟೆ ಅಲ್ಲ, ಆ ಭೂಮಿಯಲ್ಲಿ ಬೆಳೆಯುವ ಹಣ್ಣು ಹಂಪಲು ತರಕಾರಿಗಳನ್ನು ಸೇವಿಸುವ ನಮ್ಮ ಆರೋಗ್ಯದ ದೃಷ್ಟಿಯಲ್ಲೂ ಒಳ್ಳೆಯದು ಎಂದು ಕೃಷಿ ವಿಜ್ಞಾನ ಕೇಂದ್ರದ ಬೇಸಾಯ ಶಾಸ್ತ್ರ ವಿಜ್ಞಾನಿ ವಿಶ್ವನಾಥ್ ತಿಳಿಸಿದರು.

ತಾಲೂಕಿನ ಹಂಡಿಗನಾಳ ಗ್ರಾಪಂಯಲ್ಲಿ ಸೋಮವಾರ ನಡೆದ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ನಾವು ಹೆಚ್ಚೆಚ್ಚು ಬೆಳೆದು ಹೆಚ್ಚು ಲಾಭ ಮಾಡುವ ಧಾವಂತದಲ್ಲಿ ಭೂಮಿಗೆ ರಾಸಾಯನಿಕ ಗೊಬ್ಬರಗಳನ್ನು ಮಿತಿ ಮೀರಿ ಸುರಿದು ಭೂಮಿಯ ಫಲವತ್ತತೆ, ಕ್ಷಾರ ಶಕ್ತಿ ಹಾಳು ಮಾಡುತ್ತಿದ್ದೇವೆ. ಆ ಭೂಮಿಯಲ್ಲಿ ಬೆಳೆದ ಹಣ್ಣು ತರಕಾರಿಗಳನ್ನು ತಿಂದು ನಮ್ಮ ಆರೋಗ್ಯ ಹಾಳು ಮಾಡಿಕೊಳ್ಳುತ್ತಿದ್ದೇವೆ ಎಂದು ಆತಂಕ ವ್ಯಕ್ತಪಡಿಸಿದರು.



ಶಿಡ್ಲಘಟ್ಟ ತಾಲೂಕಿನ ಹಂಡಿಗನಾಳ ಗ್ರಾಪಂಯಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ಅಂಗವಾಗಿ ರೈತರಿಗೆ ಮಾಹಿತಿ ನೀಡಲಾಯಿತು.

ಇದೆ ರೀತಿ ಪರಿಸ್ಥಿತಿ ಮುಂದುವರಿದರೆ ಮುಂದೊಂದು ದಿನ ಈ ಭೂಮಿಯಲ್ಲಿ ಒಂದೇ ಒಂದು ಹಣ್ಣು ತರಕಾರಿ ಬೆಳೆಯದ ಸ್ಥಿತಿಗೆ ಭೂಮಿ ತಲುಪುತ್ತದೆ. ಹಾಗಾಗಿ ಈಗಿನಿಂದಲೇ ನಾವು ಸಾವಯವ ಕೃಷಿಗೆ ಮುಂದಾಗಬೇಕೆಂದು ಮನವಿ ಮಾಡಿದರು. ಕಡಿಮೆ ವೆಚ್ಚ ಉತ್ಕೃಷ್ಟ ಗುಣಮಟ್ಟದ ಹಣ್ಣು ತರಕಾರಿಗಳನ್ನು ಬೆಳೆಯಬಹುದು. ಆದರೆ ಇದಕ್ಕೆ ತಾಳ್ಮೆ ಸಹನೆ ಮುಖ್ಯ. ಅಧಿಕಾರಿಗಳು, ತಜ್ಞರು ನೀಡುವ ನಿರ್ದೇಶನಗಳನ್ನು ಪಾಲಿಸಬೇಕು ಎಂದು ವಿವರಿಸಿದರು.

ತೋಟಗಾರಿಕಾ ವಿಜ್ಞಾನಿ ಪ್ರವೀಣ್ ಆರ್. ಕುಮಾರ್ ಮಾತನಾಡಿ, ಇತ್ತೀಚಿನ ವರ್ಷಗಳಲ್ಲಿ ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ರೈತರ ಸಂಖ್ಯೆ ಹಾಗೂ ಪ್ರದೇಶದ ವಿಸ್ತೀರ್ಣವೂ ಹೆಚ್ಚುತ್ತಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ನಾನಾ ಬಗೆಯ ಹೂವು ಹಣ್ಣು ತರಕಾರಿ ಇನ್ನಿತರ ತೋಟಗಾರಿಕೆ ಬೆಳೆಗಳನ್ನು ವೈಜ್ಞಾನಿಕವಾಗಿ, ಹವಾಮಾನಕ್ಕೆ ಅನುಗುಣವಾಗಿ, ಮಾರುಕಟ್ಟೆಯ ಬೇಡಿಕೆಗೆ ಅನುಗುಣವಾಗಿ ಬೆಳೆದರೆ ಅಧಿಕ ಉತ್ಪನ್ನ ಮತ್ತು ಅಧಿಕ ಲಾಭಗಳಿಸಬಹುದು ಎಂದರು. ಈ ಭಾಗದಲ್ಲಿ ಹವಾಮಾನಕ್ಕೆ ಅನುಗುಣವಾಗಿ, ಮಾರುಕಟ್ಟೆ ಬೇಡಿಕೆಗೆ ಅನುಗುಣವಾಗಿ ಬೆಳೆಯಬಹುದಾದ ತೋಟಗಾರಿಕೆ ಬೆಳೆಗಳ ವಿವರ, ಬೆಳೆಗಳ ಆರೈಕೆ, ನೀಡುವ ಗೊಬ್ಬರ ಪ್ರಮಾಣದ ವಿವರಗಳನ್ನು ನೀಡಿದರು.

ಪ್ರಗತಿಪರ ರೈತ ಅಪ್ಪೇಗೌಡನಹಳ್ಳಿಯ ತ್ಯಾಗರಾಜ್ ಅವರು ಸುಸ್ಥಿರ ಕೃಷಿಗೆ ಸಾವಯುವ ಕೃಷಿಯ ಮಹತ್ವವನ್ನು ರೈತರಿಗೆ ಮನವರಿಕೆ ಮಾಡಿಕೊಟ್ಟರು. ಪ್ರಮುಖವಾಗಿ ಜೀವಾಮೃತ, ಬೀಜಾಮೃತ, ಪಂಚಗವ್ಯ, ಹಸಿರೆಲೆ ಗೊಬ್ಬರದ ಮಹತ್ವ ಮಣ್ಣು ಪರೀಕ್ಷೆ, ಪರಿಸರ ಸ್ನೇಹಿ ರೋಗ ಮತ್ತು ಕೀಟ ನಿರ್ವಹಣೆ, ಕೃಷಿ ವಿಶ್ವವಿದ್ಯಾಲಯದ ಬೀಜಗಳ ಆಯ್ಕೆ ಬೀಜೋಪಚಾರ ಮತ್ತು ಇತರ ತಂತ್ರಜ್ಞಾನಗಳ ಬಗ್ಗೆ ಮಾಹಿತಿ ನೀಡಿದರು.

ಗೃಹ ವಿಜ್ಞಾನ ವಿಜ್ಞಾನಿ ಸೌಮ್ಯ ಹಿರೇಗೌಡರ್ ಮಾತನಾಡಿ, ತರಕಾರಿ ಬೆಳೆಗಳ ಕಟಾವು ಮತ್ತು ಸಂಸ್ಕರಣೆಯ ಬಗ್ಗೆ ವಿವರಿಸಿದರು. ಪ್ರಗತಿ ಪರ ರೈತ ಮುನೇಂದ್ರ, ಕೃಷಿ ಇಲಾಖೆ, ರೇಷ್ಮೆ ಇಲಾಖೆ ಮತ್ತು ತೋಟಗಾರಿಕಾ ಇಲಾಖೆ ಅಧಿಕಾರಿಗಳು ತಮ್ಮ ಇಲಾಖೆಯ ಯೋಜನೆಗಳ ಬಗ್ಗೆ ಮತ್ತು ಬೆಳೆ ವಿಮೆಯ ಬಗ್ಗೆ ರೈತರಿಗೆ ಮಾಹಿತಿ ನೀಡಿದರು.

**Vijay Karnataka – 10-06-2025**

# ಸಾವಯವ ಕೃಷಿಯಿಂದ ಸುಸ್ಥಿರ ಬೆಳೆ



ಶಿಡ್ಲಘಟ್ಟ ತಾಲೂಕಿನ ಹಂಡಿಗನಾಳ ಗ್ರಾಮ ಪಂಚಾಯಿತಿಯಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾ ಆಯೋಜಿಸಲಾಗಿತ್ತು. ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ವಿಶ್ವನಾಥ್, ತೋಟಗಾರಿಕಾ ವಿಜ್ಞಾನಿ ಪ್ರವೀಣ್ ಕುಮಾರ.ಆರ್. ಪ್ರಗತಿಪರ ರೈತ ಎ.ಎಂ. ತ್ಯಾಗರಾಜ್ ಮತ್ತಿತರರು ಇದ್ದರು.

**ಶಿಡ್ಲಘಟ್ಟ:** ಸುಸ್ಥಿರ ಬೆಳೆಗೆ ಸಾವಯವ ಕೃಷಿಯ ಮಹತ್ವದ ಕುರಿತು ಪ್ರಗತಿಪರ ರೈತ ಎ.ಎಂ. ತ್ಯಾಗರಾಜ್ ಅವರು ರೈತರಿಗೆ ಮನವರಿಕೆ ಮಾಡಿಕೊಟ್ಟರು.

ತಾಲೂಕಿನ ಹಂಡಿಗನಾಳ ಗ್ರಾಮ ಪಂಚಾಯಿತಿಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನದಲ್ಲಿ ಮಾತನಾಡಿ, ಜೀವಾಮೃತ, ಬೀಜಾಮೃತ, ಪಂಚಗವ್ಯ, ಹಸಿರೆಲೆ ಗೊಬ್ಬರದ ಮಹತ್ವ, ಮಣ್ಣು ಪರೀಕ್ಷೆ, ಪರಿಸರ ಸ್ನೇಹಿ ರೋಗ ಮತ್ತು ಕೀಟ ನಿರ್ವಹಣೆ, ಕೃಷಿ ವಿಶ್ವವಿದ್ಯಾಲಯದ ಬೀಜಗಳ ಆಯ್ಕೆ, ಬೀಜೋಪಚಾರ ಮತ್ತು ಇತರ ತಂತ್ರಜ್ಞಾನಗಳ ಮಾಹಿತಿಯನ್ನು ರೈತರಿಗೆ ತಿಳಿಸಿಕೊಟ್ಟರು.

- **ಪ್ರಗತಿಪರ ರೈತ ತ್ಯಾಗರಾಜ್ ಮನವರಿಕೆ**
- **ಹಂಡಿಗನಾಳದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ**

ಕೃಷಿ ವಿಜ್ಞಾನ ಕೇಂದ್ರದ (ಬೇಸಾಯ ಶಾಸ್ತ್ರ) ವಿಜ್ಞಾನಿ ವಿಶ್ವನಾಥ್ ಮಾತನಾಡಿ, ಸಾವಯವ ಕೃಷಿಯ ಬಗ್ಗೆ ಮಾಹಿತಿಯನ್ನು ನೀಡಿದರು.

ತೋಟಗಾರಿಕಾ ವಿಜ್ಞಾನಿ ಆರ್. ಪ್ರವೀಣ್ ಕುಮಾರ್ ಮಾತನಾಡಿ, ತೋಟಗಾರಿಕಾ ಬೆಳೆಗಳಲ್ಲಿ ಇರುವ ನೂತನ ತಂತ್ರಜ್ಞಾನಗಳ ಮಾಹಿತಿಯನ್ನು ಹಂಚಿಕೊಂಡರು.

ಪ್ರಗತಿಪರ ರೈತ ಮುನೇಂದ್ರ ಉತ್ತಮ ಬೆಳೆಗೆ ಬೀಜದ ಆಯ್ಕೆ ಮುಖ್ಯ ಎಂದು ರೈತರಿಗೆ ಹೇಳಿದರು.

ಗೃಹ ವಿಜ್ಞಾನ ವಿಜ್ಞಾನಿ ಸೌಮ್ಯ ಹಿರೇಗೌಡರ್ ತರಕಾರಿ ಬೆಳೆಗಳ ಕಟಾವು ಮತ್ತು ಸಂಸ್ಕರಣೆಯ ಕುರಿತು ವಿವರಿಸಿದರು

ತೋಟಗಾರಿಕಾ ಇಲಾಖೆಯ ಸಹಾಯಕ ನಿದೇಶಕಿ ಮಂಜುಳಾ, ಗ್ರಾ.ಪಂ ಕಾರ್ಯದರ್ಶಿ ಶ್ರೀನಿವಾಸ್, ಸಿಬ್ಬಂದಿ ಮೋಹನ್, ರೈತರಾದ ಮುನೀಂದ್ರ, ನಾರಾಯಣಸ್ವಾಮಿ, ವೆಂಕಟೇಶ್ ಮತ್ತಿತರರು ಇದ್ದರು.

**Vijayvani -10-06-2025**

# ವಿಕಸಿತ ಕೃಷಿ ಸಂಕಲ್ಪ ಅಭಿಯಾನದಲ್ಲಿ ರೈತರಿಗೆ ಮಾಹಿತಿ



**ಸಂ.ಕ.ಸಮಾಚಾರ ಜಂಗಮಕೋಟೆ**
ಹೋಬಳಿಯ ಮೇಲೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚೌಡಸಂದ್ರ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಆವರಣದಲ್ಲಿ, ಕೃಷಿ ವಿಶ್ವವಿದ್ಯಾಲಯ ಬೆಂಗಳೂರು, ಕೃಷಿ ವಿಜ್ಞಾನ ಕೇಂದ್ರ ಚಿಕ್ಕಬಳ್ಳಾಪುರ ಹಾಗೂ ತೋಟಗಾರಿಕೆ ಇಲಾಖೆ ಶಿಡ್ಲಘಟ್ಟ ಇವರ ಸಹಯೋಗದಲ್ಲಿ, ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮ ನಡೆಯಿತು.

ಕೃಷಿ ವಿಜ್ಞಾನ ಕೇಂದ್ರ ಚಿಂತಾಮಣಿಯ (ಬೇಸಾಯ ಶಾಸ್ತ್ರ) ವಿಜ್ಞಾನಿ ವಿಶ್ವನಾಥ್ ಅವರು ಮಾತನಾಡಿ, ರೈತರು, ರಾಸಾಯನಿಕ ಗೊಬ್ಬರಗಳ ಬಳಕೆಯನ್ನು ಕಡಿಮೆ ಮಾಡಿಕೊಂಡು, ಸಾವಯುವ ಕೃಷಿಯತ್ತ ಗಮನಹರಿಸಿದರೆ, ಬೆಳೆಗಳಿಗೆ ತಗುಲಬಹುದಾದ ರೋಗಗಳನ್ನು ನಿಯಂತ್ರಣಕ್ಕೆ ತರುವುದರ ಜೊತೆಗೆ, ಭೂಮಿಯ ಫಲವತ್ತತೆಯನ್ನು ಕಾಪಾಡಲು ಸಾಧ್ಯವಾಗುತ್ತದೆ. ಇದರ ಜೊತೆಗೆ ಉತ್ತಮ ಇಳುವರಿಯ ಬೆಳೆಗಳನ್ನೂ ಬೆಳೆಯಬಹುದಾಗಿದೆ ಎಂದು ಸಾವಯುವ ಕೃಷಿಯ ಬಗ್ಗೆ ಮಾಹಿತಿಯನ್ನು ನೀಡಿದರು.

ತೋಟಗಾರಿಕಾ ವಿಜ್ಞಾನಿಯಾದ ಆರ್. ಪ್ರವೀಣ್ ಕುಮಾರ ಅವರು ಮಾತನಾಡಿ, ಮೇ29 ರಿಂದ ಜುಲೈ 12 ರವರೆಗೆ ಅಭಿಯಾನ ನಡೆಯುತ್ತಿದೆ. ತೋಟಗಾರಿಕಾ ಬೆಳೆಗಳಲ್ಲಿ ಇರುವ ನೂತನ ತಂತ್ರಜ್ಞಾನಗಳ ಬಗ್ಗೆ ಮಾಹಿತಿಯನ್ನು ಹಂಚಿಕೊಂಡರು. ಮುಂಗಾರು ಹಂಗಾಮಿಗೆ ರೈತರು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಉತ್ತಮ ಗುಣಮಟ್ಟದ ಬೀಜಗಳನ್ನು ಆಯ್ಕೆ ಮಾಡಬೇಕು, ಕಾಲಕ್ಕೆ ಸರಿಯಾಗಿ ಮಣ್ಣಿನ ಪರೀಕ್ಷೆ ಮಾಡಿಸಬೇಕು, ಸಾವಯುವ ಕೃಷಿಗೆ ಒತ್ತು ನೀಡಬೇಕು. ಮಣ್ಣಿನ ಆರೋಗ್ಯ ಕಾಪಾಡುವುದು ಕೂಡಾ ತೋಟಗಾರಿಕೆ ಮತ್ತು ಕೃಷಿಯಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ರೈತರ ಖರ್ಚು ಕಡಿಮೆ ಮಾಡಿ, ಅವರ ಆದಾಯವನ್ನು ದ್ವಿಗುಣಗೊಳಿಸುವುದು ಕೇಂದ್ರ ಸರ್ಕಾರದ ಮೂಲ ಉದ್ದೇಶವಾಗಿದೆ. ನೈಸರ್ಗಿಕವಾಗಿ ಕೃಷಿ ಮಾಡುವ ಕಡೆಗೆ ಆದ್ಯತೆ ನೀಡಬೇಕು ಎಂದರು. ಗೃಹ ವಿಜ್ಞಾನ ವಿಜ್ಞಾನಿ ಸೌಮ್ಯ ಹಿರೇಗೌಡರ್ ಅವರು, ತರಕಾರಿ ಬೆಳೆಗಳ ಕಟಾವು ಮತ್ತು ಸಂಸ್ಕರಣೆಯ ಬಗ್ಗೆ ಮಾಹಿತಿಯನ್ನು ಹಂಚಿಕೊಂಡರು.

ಕೃಷಿ ಪಂಡಿತ ಪ್ರಶಸ್ತಿ ವಿಜೇತ ತ್ಯಾಗರಾಜ್ ಅವರು, ಸುಸ್ಥಿರ ಕೃಷಿಯಲ್ಲಿ ಸಾವಯುವ ಕೃಷಿಯ ಮಹತ್ವವನ್ನು ರೈತರಿಗೆ ಮನವರಿಕೆ ಮಾಡಿಕೊಟ್ಟರು. ಅದರಲ್ಲಿ ಪ್ರಮುಖವಾಗಿ ಜೀವಾಮೃತ, ಬೀಜಾಮೃತ, ಪಂಚಗವ್ಯ,ಹಸಿರೆಲೆ ಗೊಬ್ಬರದ ಮಹತ್ವ, ಮಣ್ಣು ಪರೀಕ್ಷೆ, ಪರಿಸರ ಸ್ನೇಹಿ ರೋಗ ಮತ್ತು ಕೀಟ ನಿರ್ವಹಣೆ, ಕೃಷಿ ವಿಶ್ವವಿದ್ಯಾಲಯದ ಬೀಜಗಳ ಆಯ್ಕೆ, ಬೀಜೋಪಚಾರ ಮತ್ತು ಇತರ ತಂತ್ರಜ್ಞಾನಗಳ ಬಗ್ಗೆ ಮಾಹಿತಿಯನ್ನು ರೈತರಿಗೆ ತಿಳಿಸಿಕೊಟ್ಟರು.ಕೃಷಿ ಇಲಾಖೆಯ ಅಧಿಕಾರಿಗಳು ಇಲಾಖೆಯ ಯೋಜನೆಗಳ ಬಗ್ಗೆ ರೈತರಿಗೆ ಮಾಹಿತಿಯನ್ನು ತಿಳಿಸಿಕೊಟ್ಟರು. ತೋಟಗಾರಿಕಾ ಇಲಾಖೆಯ ಸಹಾಯಕ ನಿರ್ದೇಶಕಿ ಮಂಜುಳಾ ಅವರು, ತೋಟಗಾರಿಕಾ ಇಲಾಖೆಯ ಯೋಜನೆಗಳು ಮತ್ತು ಬೆಳೆ ವಿಮೆಯ ಬಗ್ಗೆ ಮಾಹಿತಿಯನ್ನು ಹಂಚಿಕೊಂಡರು. ರೇಷ್ಮೆ ಇಲಾಖೆಯಲ್ಲಿ ದೊರೆಯುವ ಸೌಲತ್ತಿನ ಬಗ್ಗೆ ರೈತರಿಗೆ ರೇಷ್ಮೆ ಇಲಾಖೆಯ ಅಧಿಕಾರಿಗಳು ಮಾಹಿತಿಯನ್ನು ರೈತರಿಗೆ ತಿಳಿಸಿಕೊಟ್ಟರು. ರೈತರ ಆದಾಯವನ್ನು ಜಾಸ್ತಿ ಮಾಡಲು ನೂತನ ತಂತ್ರಜ್ಞಾನಗಳ ಬಳಕೆ ಮತ್ತು ಸಾವಯುವ ಕೃಷಿ ಅತ್ಯಮೂಲ್ಯವೆಂದರು.

## ಶಿಡ್ಲಘಟ್ಟ ತಾಲೂಕಿನಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ

# ಸಾವಯುವ ಕೃಷಿ, ಹಸಿರೆಲೆಯಿಂದ ಮಣ್ಣಿನ ರಕ್ಷಣೆ

**ಚಿಂತಾಮಣಿ:** ಶಿಡ್ಲಘಟ್ಟ ತಾಲೂಕಿನ ದಿಬ್ಬೂರಹಳ್ಳಿ, ಸಾದಲಿ, ಇ.ತಿಮ್ಮಸಂದ್ರ ಗ್ರಾಮಗಳಲ್ಲಿ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ಮಂಗಳವಾರ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಹಮ್ಮಿಕೊಳ್ಳಲಾಗಿತ್ತು.

ಮುಂಗಾರು ಹಂಗಾಮಿನಲ್ಲಿ ಬೀಜಗಳ ಆಯ್ಕೆ, ವಿಶ್ವವಿದ್ಯಾಲಯ ಮತ್ತು ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಗಳಲ್ಲಿ ಬಿಡುಗಡೆಯಾಗಿರುವ ನೂತನ ತಂತ್ರಜ್ಞಾನ ಹಾಗೂ ನೈಸರ್ಗಿಕ ಕೃಷಿಯ ಪ್ರಯೋಜನ, ಉದ್ದೇಶಗಳ ಬಗ್ಗೆ ಕೃಷಿ ವಿಜ್ಞಾನ ಕೇಂದ್ರದ ಬೇಸಾಯ ಶಾಸ್ತ್ರ ವಿಜ್ಞಾನಿ ವಿಶ್ವನಾಥ್ ಅವರು ರೈತರಿಗೆ ಮನವರಿಕೆ ಮಾಡಿಕೊಟ್ಟರು. ಹಾಗೂ

ರಾಸಾಯನಿಕ ಗೊಬ್ಬರಗಳ ಬಳಕೆ ಕಡಿಮೆ ಮಾಡಿ ಸಾವಯವ ಗೊಬ್ಬರ ಬಳಕೆಗೆ ಪ್ರಾಮುಖ್ಯತೆ ನೀಡಬೇಕೆಂದು ರೈತರಿಗೆ ತಿಳಿಸಿದರು.

ತೋಟಗಾರಿಕೆ ವಿಜ್ಞಾನಿ ಪ್ರವೀಣ್ ಕುಮಾರ್ ಅವರು ಮಣ್ಣು ಪರೀಕ್ಷೆ ಉಪಯೋಗ, ಕೃಷಿಯಲ್ಲಿ ಯಾಂತ್ರೀಕರಣ, ತೋಟಗಾರಿಕಾ ಬೆಳೆಗಳಲ್ಲಿ ಸಮಗ್ರ ಬೆಳೆ ನಿರ್ವಹಣೆ ಬಗ್ಗೆ ಮಾಹಿತಿ ಹಂಚಿಕೊಂಡರು. ವಿಜ್ಞಾನಿ ಡಾ. ಪ್ರಕ್ಯ ಶ್ರೀರಾಮಕುಮಾರ್ ಅವರು ಪರಿಸರ ಸ್ನೇಹಿ ಕೀಟ ನಿರ್ವಹಣೆ ತಂತ್ರಜ್ಞಾನಗಳ ಬಗ್ಗೆ ತಿಳಿಸಿಕೊಟ್ಟರು. ತೋಟಗಾರಿಕಾ ಬೆಳೆಗಳಲ್ಲಿ ಕೊಯ್ಲೋತ್ತರ ತಂತ್ರಜ್ಞಾನಗಳ ಬಗ್ಗೆ ಗೃಹ ವಿಜ್ಞಾನಿ ಸೌಮ್ಯ ಹಿರೇಗೌಡರ್ ವಿವರಿಸಿದರು.

ಗ್ರಾಮ ಪಂಚಾಯಿತಿ ಸದಸ್ಯರು, ಪ್ರಗತಿಪರ ರೈತರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಪ್ರಗತಿಪರ ರೈತರಾದ ಸುಬ್ಬ ಅವರು ಕೃಷಿಯಲ್ಲಿ ತಾಳ್ಮೆ ಮುಖ್ಯ ಮತ್ತು ಮಣ್ಣಿನ ಫಲವತ್ತತೆ ಕಾಪಾಡುವಲ್ಲಿ ರೈತರು ಪ್ರಮುಖ ಪಾತ್ರ ವಹಿಸಬೇಕು ಎಂದು ಹೇಳಿದರು.



ದಿಬ್ಬೂರಹಳ್ಳಿಯಲ್ಲಿ ಹಮ್ಮಿಕೊಂಡಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನದಲ್ಲಿ ಚಿಂತಾಮಣಿಯ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳಾದ ವಿಶ್ವನಾಥ್, ಪ್ರವೀಣ್ ಕುಮಾರ್, ಡಾ. ಪ್ರಕ್ಯ ಶ್ರೀರಾಮ್ ಕುಮಾರ್, ಸೌಮ್ಯ ಹಿರೇಗೌಡರ್ ಮತ್ತಿತರರು ಭಾಗವಹಿಸಿದ್ದರು.

ಸಮಸ್ತ ಕನ್ನಡಿಗರ ವಿಶ್ವಾಸದ ಸಂಜೆ ದಿನಪತ್ರಿಕೆ

ಈ ಸಂಜೆ

# ಸುಸ್ಥಿರ ಕೃಷಿಗೆ ಸಾವಯವ ಕೃಷಿ ಅತ್ಯಗತ್ಯ



ಶಿಡ್ಲಘಟ್ಟ,ಜೂ.11- ವಿಕಸಿತ ಕೃಷಿ ಸಂಕಲ್ಪ ಅಭಿಯಾನವನ್ನು ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ತಾಲೂಕಿನ ಹಂಡಿಗನಾಳ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮಕ್ಕೆ ಕೃಷಿ ವಿಜ್ಞಾನ ಕೇಂದ್ರ, ಚಿಂತಾಮಣಿಯ (ಬೇಸಾಯ ಶಾಸ್ತ್ರ) ವಿಜ್ಞಾನಿಯಾದ ವಿಶ್ವನಾಥ್ ರವರು ಕಾರ್ಯಕ್ರಮದಲ್ಲಿ ಸಾವಯವ ಕೃಷಿಯ ಬಗ್ಗೆ ಮಾಹಿತಿಯನ್ನು ನೀಡಿದರು. ತೋಟಗಾರಿಕಾ ವಿಜ್ಞಾನಿಯಾದ ಪ್ರವೀಣ್ ಕುಮಾರ ಆರ್ ಅವರು ತೋಟಗಾರಿಕಾ ಬೆಳೆಗಳಲ್ಲಿ ಇರುವ ನೂತನ ತಂತ್ರಜ್ಞಾನಗಳ ಬಗ್ಗೆ ಮಾಹಿತಿಯನ್ನು ಹಂಚಿಕೊಂಡರು.

ಸೌಮ್ಯ ಹಿರೇಗೌಡರ್ ಗೃಹ ವಿಜ್ಞಾನ ವಿಜ್ಞಾನಿಯವರು ತರಕಾರಿ ಬೆಳೆಗಳ ಕಟಾವು ಮತ್ತು ಸಂಸ್ಕರಣೆಯ ಬಗ್ಗೆ ಮಾಹಿತಿಯನ್ನು ಹಂಚಿಕೊಂಡರು. ಕೃಷಿ ಪಂಡಿತ ಪ್ರಶಸ್ತಿ ವಿಜೇತ ತ್ಯಾಗರಾಜ್ ಅವರು ಕಾರ್ಯಕ್ರಮದಲ್ಲಿ ಸುಸ್ಥಿರ ಕೃಷಿಗೆ ಸಾವಯುವ ಕೃಷಿ ಮಹತ್ವವನ್ನು ರೈತರಿಗೆ ಮನವರಿಕೆ ಮಾಡಿಕೊಟ್ಟರು.

ಅದರಲ್ಲಿ ಪ್ರಮುಖವಾಗಿ ಜೀವಾಮೃತ, ಬೀಜಾಮೃತ, ಪಂಚಾಗ್ವವ, ಹಸಿರೆಲೆ ಗೊಬ್ಬರದ ಮಹತ್ವ, ಮಣ್ಣು ಪರೀಕ್ಷೆ, ಪರಿಸರ ಸ್ನೇಹಿ ರೋಗ ಮತ್ತು ಕೀಟ ನಿರ್ವಹಣೆ, ಕೃಷಿ ವಿಶ್ವವಿದ್ಯಾಲಯದ ಬೀಜಗಳ ಆಯ್ಕೆ, ಬೀಜೋಪಚಾರ ಮತ್ತು ಇತರ ತಂತ್ರಜ್ಞಾನಗಳ ಬಗ್ಗೆ ಮಾಹಿತಿಯನ್ನು ರೈತರಿಗೆ ತಿಳಿಸಿಕೊಟ್ಟರು. ಮುನೇಂದ್ರ ಪ್ರಗತಿ ಪರ ರೈತರು ಉತ್ತಮ ಬೆಳೆಗೆ ಬೀಜದ ಆಯ್ಕೆ ಮುಖ್ಯ ಎಂದು ರೈತರಿಗೆ ತಿಳಿಸಿದರು, ಈ ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳು ಇಲಾಖೆಯ ಯೋಜನೆಗಳ ಬಗ್ಗೆ ರೈತರಿಗೆ ಮಾಹಿತಿಯನ್ನು ತಿಳಿಸಿಕೊಟ್ಟರು.

ತೋಟಗಾರಿಕಾ ಇಲಾಖೆಯ ಸಹಾಯಕ ನಿರ್ದೇಶಕರಾದ ಮಂಜುಳಾ ರವರು ತೋಟಗಾರಿಕಾ ಇಲಾಖೆಯ ಯೋಜನೆಗಳು ಮತ್ತು ಬೆಳೆ ವಿಮೆಯ ಬಗ್ಗೆ ಮಾಹಿತಿಯನ್ನು ಹಂಚಿಕೊಂಡರು. ರೇಷ್ಮೆ ಇಲಾಖೆಯಲ್ಲಿ ದೊರೆಯುವ ಸೌಲತ್ತಿನ ಬಗ್ಗೆ ರೈತರಿಗೆ ರೇಷ್ಮೆ ಇಲಾಖೆಯ ಅಧಿಕಾರಿಗಳು ಮಾಹಿತಿಯನ್ನು ರೈತರಿಗೆ ತಿಳಿಸಿಕೊಟ್ಟರು.

ಒಟ್ಟಾರೆಯಾಗಿ ರೈತರ ಆದಾಯವನ್ನು ಜಾಸ್ತಿ ಮಾಡಲು ನೂತನ ತಂತ್ರಜ್ಞಾನಗಳ ಬಳಕೆ ಮತ್ತು ಸಾವಯುವ ಕೃಷಿ ಅತ್ಯಮೂಲ್ಯ ಎಂದು ತಿಳಿಸಿಕೊಟ್ಟರು.

VK ವಿಜಯ ಕರ್ನಾಟಕ
e-paper

# ವೈಜ್ಞಾನಿಕ ಕೃಷಿಗೆ ಒತ್ತು ನೀಡಿದರೆ ಬೆಳೆ ಲಾಭದಾಯಕ

## ವಿಜ್ಞಾನಿ ಪ್ರವೀಣ್ ಕುಮಾರ್ ಹೇಳಿಕೆ । ಚಾಕವೇಲುನಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ

**ವಿಕ ಸುದ್ದಿಲೋಕ** ಚೇಳೂರು

ರಾಸಾಯನಿಕ ಗೊಬ್ಬರಗಳ ಬಳಕೆ ಕಡಿಮೆ ಮಾಡಿ, ಸಾವಯವ ಗೊಬ್ಬರಗಳ ಬಳಕೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕು ಎಂದು ಚಿಂತಾಮಣಿ ತೋಟಗಾರಿಕೆ ವಿಜ್ಞಾನಿ ಪ್ರವೀಣ್ ಕುಮಾರ್ ಹೇಳಿದರು.

ಚೇಳೂರು ತಾಲೂಕಿನ ಚಾಕವೇಲು ಗ್ರಾಮದಲ್ಲಿ ಕೃಷಿ ವಿಜ್ಞಾನ ಕೇಂದ್ರ ಚಿಂತಾಮಣಿ, ಕೃಷಿ, ತೋಟಗಾರಿಕೆ, ರೇಷ್ಮೆ ಇಲಾಖೆ, ಇತರೆ ಸಂಸ್ಥೆಗಳ ಸಹಯೋಗದಲ್ಲಿ ನಡೆದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮುಂಗಾರು ಹಂಗಾಮಿನಲ್ಲಿ ರೈತರು ಬೀಜಗಳ ಆಯ್ಕೆ ಕುರಿತು ವಿಶ್ವವಿದ್ಯಾಲಯಗಳು ಮತ್ತು ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆಗಳಲ್ಲಿ ಬಿಡುಗಡೆಯಾಗಿರುವ ನೂತನ ತಂತ್ರಜ್ಞಾನಗಳ ಕುರಿತು ಮಾಹಿತಿ ನೀಡುವುದೇ ಈ ಕಾರ್ಯಕ್ರಮದ ಮುಖ್ಯ ಉದ್ದೇಶ ಎಂದರು.

ಚಿಂತಾಮಣಿ ವಿಜ್ಞಾನಿ ಡಾ. ಪ್ರಕ್ಯ ಶ್ರೀರಾಮ್ ಕುಮಾರ್ ಮಾತನಾಡಿ, ತಮ್ಮ ಸಂಸ್ಥೆಯಿಂದ ಬಿಡುಗಡೆಯಾಗಿರುವ ಪರಿಸರ ಸ್ನೇಹಿ ಕೀಟ ನಿರ್ವಹಣೆ ತಂತ್ರಜ್ಞಾನಗಳ ಬಗ್ಗೆ ಮಾಹಿತಿ ನೀಡಿದರು.



ಚೇಳೂರು ತಾಲೂಕು ಚಾಕವೇಲು ಗ್ರಾಮದಲ್ಲಿ ಕೃಷಿ ವಿಜ್ಞಾನ ಕೇಂದ್ರ ಚಿಂತಾಮಣಿ, ಕೃಷಿ, ತೋಟಗಾರಿಕೆ, ರೇಷ್ಮೆ ಇಲಾಖೆ ಮತ್ತು ಇತರೆ ಸಂಸ್ಥೆಗಳ ಸಹಯೋಗದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮ ನಡೆಯಿತು.

ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮದಲ್ಲಿ ಗೃಹ ವಿಜ್ಞಾನಿ ಸೌಮ್ಯ ಹಿರೇಗೌಡರ್, ಚೇಳೂರು ಕೃಷಿ ಅಧಿಕಾರಿ ಗಂಗಾಧರ್‌ರೆಡ್ಡಿ, ಸಹಾಯಕ ತಾಂತ್ರಿಕ ವ್ಯವಸ್ಥಾಪಕ ಟಿ.ದಿವ್ಯ, ಬಾಗೇಪಲ್ಲಿ ತೋಟಗಾರಿಕೆ ಸಹಾಯಕ ಅಧಿಕಾರಿ ಶಾಂತಣ್ಣ, ಚಾಕವೇಲು ಗ್ರಾಪಂ ಅಧ್ಯಕ್ಷೆ ರಾಮಲಕ್ಷ್ಮಮ್ಮ, ಉಪಾಧ್ಯಕ್ಷೆ ಪ್ರಭಾವತಿ, ಆಶಾ ಕಾರ್ಯಕರ್ತರು, ಪ್ರಗತಿಪರ ರೈತ ಮಂಜುನಾಥರೆಡ್ಡಿ, ಪುಲಗಲ್ಲು ಗ್ರಾಪಂ ಪ್ರಗತಿಪರ ರೈತ ಪಿ.ಎನ್. ಶಂಕರಪ್ಪ, ಊದವಾರಪಲ್ಲಿ ವೆಂಕಟಶಿವಾರೆಡ್ಡಿ, ಎಂ. ನಲ್ಲಗುಟ್ಟಪಲ್ಲಿ ಗ್ರಾಪಂ ರೈತ ಸಂಘದ ಸಂಚಾಲಕ ಪೆದ್ದೂರು ವೆಂಕಟರವಣಪ್ಪ ಸೇರಿದಂತೆ ಸುತ್ತಮುತ್ತಲ ಗ್ರಾಮಗಳ ರೈತರು ಮತ್ತು ರೈತ ಮಹಿಳೆಯರು ಭಾಗವಹಿಸಿದ್ದರು.

ಚೇಳೂರು ತಾಲೂಕಿನ ಚೇಳೂರು, ಪುಲಗಲ್, ಎಂ. ನಲ್ಲಗುಟ್ಟಪಲ್ಲಿ ಗ್ರಾಪಂಗಳಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮ ನಡೆಸಿ, ರೈತಾಪಿ ಜನರಿಗೆ ಬೆಳೆಗಳ ಕುರಿತು ಅರಿವು ಮೂಡಿಸಿದರು.

**VijayKarnataka – 11-06-2025**

ಕೋಲಾರ ಪತ್ರಿಕೆ
page-3
12 Jun 2025

# 'ವೈಜ್ಞಾನಿಕ ಕೃಷಿಗೆ ಹೆಚ್ಚು ಒತ್ತು ನೀಡಿದರೆ ರಾಸಾಯನ ಮುಕ್ತ ಬೆಳೆಗೆ ಲಾಭದಾಯಕ'



**ಚೇಳೂರು:** ರಾಸಾಯನಿಕ ಗೊಬ್ಬರಗಳ ಬಳಕೆ ಕಡಿಮೆ ಮಾಡಿ ಸಾವಯವ ಗೊಬ್ಬರಗಳ ಬಳಕೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕಾಗಿದೆ ಎಂದು ಚಿಂತಾಮಣಿ ತೋಟಗಾರಿಕೆ ವಿಜ್ಞಾನಿಯಾದ ಪ್ರವೀಣ್ ಕುಮಾರ್ ಹೇಳಿದರು.

ಚೇಳೂರು ತಾಲೂಕಿನ ಚಾಕವೇಲು ಗ್ರಾಮದಲ್ಲಿ ಕೃಷಿ ವಿಜ್ಞಾನ ಕೇಂದ್ರ ಚಿಂತಾಮಣಿ, ಕೃಷಿ. ತೋಟಗಾರಿಕೆ. ರೇಷ್ಮೆ ಇಲಾಖೆ. ಇತರೆ ಸಂಸ್ಥೆಗಳ ಸಹಯೋಗದಲ್ಲಿ ನಡೆದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿ, ಮುಂಗಾರು ಹಂಗಾಮಿನಲ್ಲಿ ರೈತರು ಬೀಜಗಳ ಆಯ್ಕೆ ಕುರಿತು ವಿಶ್ವವಿದ್ಯಾಲಯಗಳ ಮತ್ತು ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಗಳಲ್ಲಿ ಬಿಡುಗಡೆ ಯಾಗಿರುವ ನೂತನ ತಂತ್ರಜ್ಞಾನಗಳ ಕುರಿತು ಮಾಹಿತಿಯನ್ನು ನೀಡುವುದೇ ಈ ಕಾರ್ಯಕ್ರಮದ ಮುಖ್ಯ ಉದ್ದೇಶ ಎಂದರು.

ಚಿಂತಾಮಣಿ ವಿಜ್ಞಾನಿಯಾದ ಡಾ.ಪ್ರಕ್ಯ ಶ್ರೀರಾಮ್‌ಕುಮಾರ್ ಮಾತನಾಡಿ ತಮ್ಮ ಸಂಸ್ಥೆಯಿಂದ ಬಿಡುಗಡೆಯಾಗಿರುವ ಪರಿಸರ ಸ್ನೇಹಿ ಕೀಟ ನಿರ್ವಹಣೆ ತಂತ್ರಜ್ಞಾನಗಳ ಬಗ್ಗೆ ಅಗತ್ಯ ಮಾಹಿತಿ ನೀಡಿದರು.

ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮದಲ್ಲಿ ಗೃಹ ವಿಜ್ಞಾನಿ ಸೌಮ್ಯ ಹೀರಡಗೌಡರ್, ಚೇಳೂರು ಕೃಷಿ ಅಧಿಕಾರಿ ಗಂಗಾಧರ್ ರೆಡ್ಡಿ, ಸಹಾಯಕ ತಾಂತ್ರಿಕ ವ್ಯವಸ್ಥಾಪಕಿ ಎ.ದಿವ್ಯ ಬಾಗೇಪಲ್ಲಿ ತೋಟಗಾರಿಕೆ ಸಹಾಯಕ ಅಧಿಕಾರಿ ಶಾಂತಣ್ಣ, ಚಾಕವೇಲು ಗ್ರಾಮಪಂಚಾಯಿತಿ ಅಧ್ಯಕ್ಷಣೆ ರಾಮಲಕ್ಷ್ಮಮ್ಮ, ಉಪಾಧ್ಯಕ್ಷೆ ಪ್ರಭಾವತಿ, ಆಶಾ ಕಾರ್ಯಕರ್ತರು, ಪ್ರಗತಿಪರ ರೈತ ಮಂಜುನಾಥರೆಡ್ಡಿ ಪುಲಗಲ್ಲು ಗ್ರಾ.ಪಂ. ಪ್ರಗತಿಪರ ರೈತ ಪಿ.ಎನ್.ಶಂಕರಪ್ಪ, ಊದವಾರಪಲ್ಲಿ ವೆಂಕಟಶಿವಾರೆಡ್ಡಿ. ಎಂ.ನಲ್ಲಗುಟ್ಲಪಲ್ಲಿ ಗ್ರಾ.ಪಂ.ಯ ರೈತ ಸಂಘದ ಸಂಚಾಲಕ ಪೆದ್ದೂರು ವೆಂಕಟರವಣಪ್ಪ. ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ರೈತರು ಮತ್ತು ರೈತ ಮಹಿಳೆಯರು. ಭಾಗವಹಿಸಿದ್ದರು.

ತಾಲೂಕಿನ ಚೇಳೂರು, ಪುಲಗಲ್, ಎಂ.ನಲ್ಲಗುಟ್ಲಪಲ್ಲಿ, ಗ್ರಾಮ ಪಂಚಾಯಿತಿಗಳಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮಗಳು ನಡೆಸಿ ರೈತಾಪಿ ಜನರಲ್ಲಿ ಬೆಳೆಗಳ ಕುರಿತು ಅರಿವು ಮೂಡಿಸಿದರು.

# 'ವೈಜ್ಞಾನಿಕ ಕೃಷಿಗೆ ಹೆಚ್ಚು ಒತ್ತು ನೀಡಿ'

## ರಾಸಾಯನ ಮುಕ್ತ ಬೆಳೆ ಲಾಭದಾಯಕ: ಪ್ರವೀಣ್ ಕುಮಾರ್ ಅಭಿಮತ

■ **ಉದಯವಾಣಿ ಸಮಾಚಾರ**

**ಚೇಳೂರು:** ರಾಸಾಯನಿಕ ಗೊಬ್ಬರಗಳ ಬಳಕೆ ಕಡಿಮೆ ಮಾಡಿ ಸಾವಯವ ಗೊಬ್ಬರ ಗಳ ಬಳಕೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡಬೇಕಾಗಿದೆ ಎಂದು ಚಿಂತಾಮಣಿ ತೋಟಗಾರಿಕೆ ವಿಜ್ಞಾನಿಯಾದ ಪ್ರವೀಣ್ ಕುಮಾರ್ ಹೇಳಿದರು.

ಅವರು ಚೇಳೂರು ತಾಲೂಕಿನ ಚಾಕವೇಲು ಗ್ರಾಮದಲ್ಲಿ ಕೃಷಿ ವಿಜ್ಞಾನ ಕೇಂದ್ರ ಚಿಂತಾಮಣಿ, ಕೃಷಿ, ತೋಟಗಾರಿಕೆ, ರೇಷ್ಮೆ ಇಲಾಖೆ ಇತರೆ ಸಂಸ್ಥೆಗಳ ಸಹಯೋಗದಲ್ಲಿ ನಡೆದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿ, ಮುಂಗಾರು ಹಂಗಾಮಿನಲ್ಲಿ ರೈತರು ಬೀಜ ಗಳ ಆಯ್ಕೆ ಕುರಿತು ವಿಶ್ವವಿದ್ಯಾಲಯಗಳ ಮತ್ತು ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಗಳಲ್ಲಿ ಬಿಡುಗಡೆ ಯಾಗಿ ರುವ ನೂತನ ತಂತ್ರಜ್ಞಾನಗಳ ಕುರಿತು ಮಾಹಿತಿಯನ್ನು ನೀಡುವುದೇ ಈ ಕಾರ್ಯಕ್ರಮದ ಮುಖ್ಯ ಉದ್ದೇಶ ಎಂದರು.

ಚಿಂತಾಮಣಿ ವಿಜ್ಞಾನಿಯಾದ ಡಾ.ಪ್ರಕ್ಯ ಶ್ರೀರಾಮ್ ಕುಮಾರ್ ಮಾತನಾಡಿ, ತಮ್ಮ ಸಂಸ್ಥೆಯಿಂದ ಬಿಡುಗಡೆಯಾಗಿರುವ ಪರಿಸರ ಸ್ನೇಹಿ ಕೀಟ ನಿರ್ವಹಣೆ ತಂತ್ರಜ್ಞಾನಗಳ ಬಗ್ಗೆ ಅಗತ್ಯ ಮಾಹಿತಿ ನೀಡಿದರು.

ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮದಲ್ಲಿ ಗೃಹ ವಿಜ್ಞಾನಿ ಸೌಮ್ಯ ಹೀರಡಗೌಡರ್, ಚೇಳೂರು ಕೃಷಿ ಅಧಿಕಾರಿ ಗಂಗಾಧರ್ ರೆಡ್ಡಿ, ಸಹಾಯಕ ತಾಂತ್ರಿಕ ವ್ಯವಸ್ಥಾಪಕಿ ಎ.ದಿವ್ಯ, ಬಾಗೇಪಲ್ಲಿ ತೋಟಗಾರಿಕೆ ಸಹಾಯಕ ಅಧಿಕಾರಿ ಶಾಂತಣ್ಣ, ಚಾಕವೇಲು ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಾಮಲಕ್ಷ್ಮಮ್ಮ, ಉಪಾಧ್ಯಕ್ಷೆ ಪ್ರಭಾವತಿ, ಆಶಾ ಕಾರ್ಯಕರ್ತರು, ಪ್ರಗತಿಪರ ರೈತ ಮಂಜುನಾಥರೆಡ್ಡಿ, ಪುಲಗಲ್ಲು ಗ್ರಾಪಂ ಪ್ರಗತಿಪರ ರೈತ ಪಿ.ಎನ್.ಶಂಕರಪ್ಪ, ಊದವಾರಪಲ್ಲಿ ವೆಂಕಟಶಿವಾರೆಡ್ಡಿ, ಎಂ.ನಲ್ಲಗುಟ್ಲಪಲ್ಲಿಗ್ರಾಪಂಯ ರೈತ ಸಂಘದ ಸಂಚಾಲಕ ಪೆದ್ದೂರು ವೆಂಕಟರವಣಪ್ಪ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ರೈತರು ಮತ್ತು ರೈತ ಮಹಿಳೆಯರು ಭಾಗವಹಿಸಿದ್ದರು. ಚೇಳೂರು ತಾಲೂಕಿನ ಚೇಳೂರು, ಪುಲಗಲ್, ಎಂ.ನಲ್ಲಗುಟ್ಲಪಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮಗಳು ನಡೆಸಿ ರೈತಾಪಿ ಜನರಲ್ಲಿ ಬೆಳೆಗಳ ಕುರಿತು ಅರಿವು ಮೂಡಿಸಿದರು.



ಚೇಳೂರು ತಾಲೂಕಿನ ಪುಲಗಲ್ ಗ್ರಾಮದಲ್ಲಿ ಕೃಷಿ ವಿಜ್ಞಾನ ಕೇಂದ್ರ ಚಿಂತಾಮಣಿ, ಕೃಷಿ, ತೋಟಗಾರಿಕೆ, ರೇಷ್ಮೆ ಇಲಾಖೆ ಇತರೆ ಸಂಸ್ಥೆಗಳ ಸಹಯೋಗದಲ್ಲಿ ನಡೆದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮ.